ಸತ್ಯ ಮತ್ತು ಧೈರ್ಯದ ಧ್ವನಿ

# ತುಂಗ ಬಿಂಬ

TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923








ಸಂಪುಟ: 04 Vol: | ಸಂಚಿಕೆ: 124 Issue: | ರಾಯಚೂರು Raichur | 26-10-2026 | ಸೋಮವಾರ Monday | ಪುಟ : 04 Page: | ಬೆಲೆ: ₹ 2.00 Price: | Postal Reg No.: RCR/L/RNP/95/2025-27 | tungabimba@gmail.com | ಸಂಪಾದಕರು : ಗುರುರಾಜ ಕೆ | Editor: Gururaja K 98863 85685


## ಪಾಟ್ನಾದಲ್ಲಿ ಖರ್ಗೆ ಭಾಷಣದ ವೇಳೆ ಗದ್ದಲ:

# ಪ್ರಧಾನಿ ಮೋದಿ ಹಾಗೂ ಬಿಜೆಪಿ ವಿರುದ್ಧ ತೀವ್ರ ವಾಗ್ದಾಳಿ

ಪಾಟ್ನಾ: ಬಿಹಾರದ ಪಾಟ್ನಾದಲ್ಲಿ ನಡೆದ ಡಾ. ಶ್ರೀಕೃಷ್ಣ ಸಿಂಗ್ ಅವರ 139ನೇ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಕಾಂಗ್ರೆಸ್ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಭಾಷಣದ ವೇಳೆ ಗದ್ದಲ ಉಂಟಾಗಿದ್ದು, ಪ್ರಧಾನಿ ನರೇಂದ್ರ ಮೋದಿ ಅವರ ತಂದೆಯ ಕುರಿತು ನೀಡಿದ ಹೇಳಿಕೆ ವಿವಾದಕ್ಕೆ ಕಾರಣವಾಗಿದೆ.

ಕಾರ್ಯಕ್ರಮದಲ್ಲಿ ಖರ್ಗೆ ಮಾತನಾಡುತ್ತಿದ್ದ ಸಂದರ್ಭದಲ್ಲಿ ವ್ಯಕ್ತಿಯೊಬ್ಬರು ಪ್ರಧಾನಿ ಮೋದಿ ಎಲ್ಲಿಗೂ ಹೋಗುವುದಿಲ್ಲ ಎಂದು ಹೇಳಿದಾಗ, ಅದಕ್ಕೆ ತೀಕ್ಷ್ಣವಾಗಿ ಪ್ರತಿಕ್ರಿಯಿಸಿದ ಖರ್ಗೆ, ಮೋದಿ ಅವರ ತಂದೆಯೂ ಹೋಗುತ್ತಾರೆ ಎಂಬ ಅರ್ಥದಲ್ಲಿ ಹೇಳಿಕೆ ನೀಡಿದರು ಎನ್ನಲಾಗಿದೆ. ಈ ಮಾತಿನಿಂದ ಸಭೆಯಲ್ಲಿ ಗದ್ದಲ



ಉಂಟಾದರೂ ಖರ್ಗೆ ತಮ್ಮ ಭಾಷಣವನ್ನು ಮುಂದುವರಿಸಿದರು.

ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ ಖರ್ಗೆ, ದೇಶದಲ್ಲಿ ಬಿಜೆಪಿ ಆಡಳಿತವನ್ನು ಕೊನೆಗಾಣಿಸುವ ಅಗತ್ಯವಿದೆ ಎಂದು ಹೇಳಿದರು. ರಾಷ್ಟ್ರೀಯ ಸ್ವಯಂಸೇವಕ ಸಂಘದ ಸಿದ್ಧಾಂತವನ್ನು ಟೀಕಿಸಿದ ಅವರು, ಆರ್‌ಎಸ್‌ಎಸ್ ದ್ವೇಷದ ರಾಜಕಾರಣ ಮಾಡುತ್ತಿದೆ ಎಂದು ಆರೋಪಿಸಿದರು. ಸಮಾಜದಲ್ಲಿ ಅಸ್ಪೃಶ್ಯತೆ ಇನ್ನೂ ಮುಂದುವರಿದಿರುವುದನ್ನು ಪ್ರಸ್ತಾಪಿಸಿ, ಇಂತಹ ಪರಿಸ್ಥಿತಿಯಲ್ಲಿ ಜನರು ಆರ್‌ಎಸ್‌ಎಸ್ ಸಂಘಟನೆಗೆ ಏಕೆ ಸೇರುತ್ತಿದ್ದಾರೆ ಎಂದು ಪ್ರಶ್ನಿಸಿದರು.

ಚುನಾವಣಾ ವ್ಯವಸ್ಥೆಯ ಬಗ್ಗೆಯೂ ಗಂಭೀರ ಆರೋಪ ಮಾಡಿದ ಖರ್ಗೆ, ಬಿಜೆಪಿ ಮತದಾರರ ಪಟ್ಟಿಯಿಂದ ಹೆಸರುಗಳನ್ನು ತೆಗೆದುಹಾಕುವ ಪ್ರಯತ್ನ ನಡೆಸುತ್ತಿದೆ. ರಾಜಕೀಯವಾಗಿ ಅನುಕೂಲವಾಗದ ಸಂದರ್ಭಗಳಲ್ಲಿ ಶಾಸಕರನ್ನು ಖರೀದಿಸುವ ಮೂಲಕ ಅಧಿಕಾರ ಉಳಿಸಿಕೊಳ್ಳಲು ಮುಂದಾಗುತ್ತಿದೆ ಎಂದು ದೂರಿದರು.

ಚುನಾವಣಾ ಪ್ರಕ್ರಿಯೆಯಲ್ಲಿ ಕೇಂದ್ರ ಸರ್ಕಾರ ಮತ್ತು ಚುನಾವಣಾ ಆಯೋಗದ ನಡುವೆ ಹೊಂದಾಣಿಕೆ ಇದೆ ಎಂದು ಆರೋಪಿಸಿದ ಅವರು, ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ಕಾರ್ಯವೈಖರಿಯನ್ನು ತೀವ್ರವಾಗಿ ಟೀಕಿಸಿದರು. ಅವರನ್ನು ದೇಶದ್ರೋಹಿ ಎಂದು ಕರೆದ ಖರ್ಗೆ, ಅವರ ರಕ್ಷಣೆಗೆ ಕಾನೂನು ರೂಪಿಸಲಾಗಿದೆ ಎಂಬ ಆರೋಪವನ್ನೂ ಮಾಡಿದರು.

ಬಿಹಾರ ಸರ್ಕಾರದ ಆಡಳಿತದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ ಖರ್ಗೆ, ರಾಜ್ಯದಲ್ಲಿ ಆಡಳಿತ ವ್ಯವಸ್ಥೆ ಹದಗೆಟ್ಟಿದ್ದು, ಜಂಗಲ್ ರಾಜ್ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಟೀಕಿಸಿದರು.

ಬಿಹಾರದ ಮಾಜಿ ಮುಖ್ಯಮಂತ್ರಿ ಡಾ. ಶ್ರೀಕೃಷ್ಣ ಸಿಂಗ್ ಅವರ ಕೊಡುಗೆಗಳನ್ನು ಸ್ಮರಿಸಿದ ಅವರು, ಭೂಮಾಲೀಕ ಸಮುದಾಯಕ್ಕೆ ಸೇರಿದವರಾಗಿದ್ದರೂ ಜಮೀನ್ದಾರಿ ಪದ್ಧತಿಯನ್ನು ರದ್ದುಗೊಳಿಸುವ ಮೂಲಕ ಸಾಮಾಜಿಕ

2ನೇ ಪುಟಕ್ಕೆ

## ವ್ಯಾಪಾರಿ ನರಸಿಂಹ ಕೊಲೆ ಪ್ರಕರಣ: ಆರೋಪಿ ತಿಲಕ್ ಸಿಂಗ್ ಬಂಧನ

ರಾಯಚೂರು: ನಗರದ ಎಲ್‌ಬಿಎಸ್ ಬಡಾವಣೆಯ ಕ್ರೌನ್ ಬೇಕರಿ ಸಮೀಪ ಶನಿವಾರ ಕ್ಷುಲ್ಲಕ ವಿಚಾರಕ್ಕೆ ನಡೆದ ಜಗಳದಲ್ಲಿ ವ್ಯಾಪಾರಿ ನರಸಿಂಹ ಅವರನ್ನು ಕೊಲೆ ಮಾಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿ ತಿಲಕ್ ಸಿಂಗ್‌ನನ್ನು ಪೊಲೀಸರು ಮಧ್ಯರಾತ್ರಿ ಬಂಧಿಸಿದ್ದಾರೆ.

ಕೊಲೆ ಘಟನೆ ನಡೆದ ಬಳಿಕ ತಲೆಮರೆಸಿಕೊಂಡಿದ್ದ ಆರೋಪಿಯ ಪತ್ತೆಗಾಗಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಷು ಗಿರಿ ಅವರ ಮಾರ್ಗದರ್ಶನದಲ್ಲಿ ಆರು ಪೊಲೀಸ್ ತಂಡಗಳನ್ನು ರಚಿಸಿ ಶೋಧ ಕಾರ್ಯಾಚರಣೆ ಕೈಗೊಳ್ಳಲಾಗಿತ್ತು. ವಿವಿಧೆಡೆ ತೀವ್ರ ಹುಡುಕಾಟ ನಡೆಸಿದ ಪೊಲೀಸರು ತಡರಾತ್ರಿವರೆಗೂ ಕಾರ್ಯಾಚರಣೆ ಮುಂದುವರಿಸಿ, ಮಧ್ಯರಾತ್ರಿ ಆರೋಪಿಯನ್ನು ಬಂಧಿಸಿದ್ದಾರೆ ಎಂದು ತಿಳಿದುಬಂದಿದೆ.

ಈ ಕುರಿತು ತುಂಗ ಬಿಂಬ ಪತ್ರಿಕೆಯ ವರದಿಗಾರರು ಡಿವೈಎಸ್‌ಪಿ ಶಾಂತವೀರ ಅವರನ್ನು ದೂರವಾಣಿ ಮೂಲಕ ಸಂಪರ್ಕಿಸಿ ಮಾಹಿತಿ



ಪಡೆದಿದ್ದು, ಕೊಲೆ ಪ್ರಕರಣದ ಆರೋಪಿ ತಿಲಕ್ ಸಿಂಗ್‌ನನ್ನು ಬಂಧಿಸಿರುವುದನ್ನು ಅವರು ಖಚಿತಪಡಿಸಿದ್ದಾರೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ಮಾರ್ಕೆಟ್ ಯಾರ್ಡ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಬಂಧಿತ ಆರೋಪಿಯನ್ನು ಪೊಲೀಸರು ವಿಚಾರಣೆಗೆ ಒಳಪಡಿಸಿದ್ದಾರೆ. ಕೊಲೆಗೆ ನಿಖರ ಕಾರಣ ಹಾಗೂ ಘಟನೆಯ ಹಿಂದಿನ ಇತರ ಅಂಶಗಳ ಕುರಿತು ತನಿಖೆ ಮುಂದುವರಿದಿದೆ.

## ಗ್ರಾಮೀಣ ಜನರ ಆರೋಗ್ಯ ರಕ್ಷಣೆಗೆ ಸರ್ಕಾರದಿಂದ ಹಲವು ಯೋಜನೆಗಳ ಅನುಷ್ಠಾನ: ಎನ್.ಎಸ್. ಬೋಸರಾಜು

ಮಾನ್ವಿ: ಗ್ರಾಮೀಣ ಪ್ರದೇಶದ ಜನರಿಗೆ ಗುಣಮಟ್ಟದ ವೈದ್ಯಕೀಯ ಸೇವೆ ಒದಗಿಸುವ ಉದ್ದೇಶದಿಂದ ರಾಜ್ಯ ಸರ್ಕಾರ ಹಲವು ಆರೋಗ್ಯ ಕಾರ್ಯಕ್ರಮಗಳನ್ನು ಜಾರಿಗೊಳಿಸುತ್ತಿದ್ದು, ಬಡವರು ಹಾಗೂ ಸಾಮಾನ್ಯ ಜನರಿಗೆ ಅತ್ಯಾಧುನಿಕ ಚಿಕಿತ್ಸಾ ಸೌಲಭ್ಯಗಳು ದೊರೆಯುವಂತೆ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಮಾಜಿ ಸಚಿವ, ವಿಧಾನ ಪರಿಷತ್ ಸದಸ್ಯ ಎನ್.ಎಸ್. ಬೋಸರಾಜು ಹೇಳಿದರು.

ತಾಲೂಕಿನ ಪೋತ್ನಾಳ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಮೈದಾನದಲ್ಲಿ ಶಾರದಾ ಆಸ್ಪತ್ರೆ ಪೋತ್ನಾಳ ಹಾಗೂ ಸಿಂಧನೂರಿನ ಶ್ರೀ ಗವಿಸಿದ್ದೇಶ್ವರ ಆಸ್ಪತ್ರೆಯ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಉಚಿತ ಆರೋಗ್ಯ ತಪಾಸಣೆ ಮತ್ತು ಸ್ವಯಂಪ್ರೇರಿತ ರಕ್ತದಾನ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.



ಗ್ರಾಮೀಣ ಭಾಗದ ಜನರಿಗೆ ತಜ್ಞ ವೈದ್ಯರ ಸೇವೆ ಲಭ್ಯವಾಗುವಂತೆ ಸರ್ಕಾರದ ವತಿಯಿಂದ ಆರೋಗ್ಯ ಶಿಬಿರಗಳನ್ನು ಆಯೋಜಿಸಲಾಗುತ್ತಿದೆ. ಇಂತಹ ಶಿಬಿರಗಳಲ್ಲಿ ರೋಗಿಗಳಿಗೆ ಪ್ರಾಥಮಿಕ ತಪಾಸಣೆ ಮತ್ತು ಚಿಕಿತ್ಸೆ ನೀಡುವುದರ ಜೊತೆಗೆ ಹೆಚ್ಚಿನ ಚಿಕಿತ್ಸೆಯ ಅಗತ್ಯವಿರುವವರನ್ನು ಬೆಂಗಳೂರಿನ ಆಸ್ಪತ್ರೆಗಳಿಗೆ ಕಳುಹಿಸಿ ಸೂಕ್ತ ವೈದ್ಯಕೀಯ ಸೌಲಭ್ಯ ಕಲ್ಪಿಸುವ ವ್ಯವಸ್ಥೆಯನ್ನೂ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಪೋತ್ನಾಳ ಗ್ರಾಮದ ಸರ್ಕಾರಿ ಆಸ್ಪತ್ರೆಯನ್ನು ₹15 ಕೋಟಿ ವೆಚ್ಚದಲ್ಲಿ ಆಧುನೀಕರಣಗೊಳಿಸಲು ಮಂಜೂರಾತಿ ದೊರೆತಿದ್ದು, ಶೀಘ್ರದಲ್ಲೇ

2ನೇ ಪುಟಕ್ಕೆ

## ನ. 10ರೊಳಗೆ ಜಿಲ್ಲೆಯ 14 ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರ ಆಯ್ಕೆ ಪೂರ್ಣ: ರಾಜಶೇಖರ ಪಾಟೀಲ್

ರಾಯಚೂರು: ಕಾಂಗ್ರೆಸ್ ಪಕ್ಷದ ಸಂಘಟನೆಯನ್ನು ತಳಮಟ್ಟದಿಂದ ಬಲಪಡಿಸುವ ಉದ್ದೇಶದಿಂದ ಹಮ್ಮಿಕೊಂಡಿರುವ ಸಂಘಟನ್ ಸೃಜನ್ ಅಭಿಯಾನ2ರ ಅಂಗವಾಗಿ ರಾಯಚೂರು ಜಿಲ್ಲೆಯ ಏಳು ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ 14 ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರನ್ನು ಆಯ್ಕೆ ಮಾಡಲಾಗುವುದು. ನವೆಂಬರ್ 10ರೊಳಗೆ ಆಯ್ಕೆ ಪ್ರಕ್ರಿಯೆಯನ್ನು ಪೂರ್ಣಗೊಳಿಸುವ ಗುರಿ ಹೊಂದಲಾಗಿದೆ ಎಂದು ಮಾಜಿ ಸಚಿವ ಹಾಗೂ ಕೆಪಿಸಿಸಿ ಉಸ್ತುವಾರಿ ರಾಜಶೇಖರ ಪಾಟೀಲ್ ಹುಮನಾಬಾದ್ ತಿಳಿಸಿದರು.

ನಗರದ ಜಿಲ್ಲಾ ಕಾಂಗ್ರೆಸ್ ಸಮಿತಿ ಕಾರ್ಯಾಲಯದಲ್ಲಿ ಭಾನುವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಂಘಟನ್ ಸೃಜನ್ ಅಭಿಯಾನದ ಮೊದಲ ಹಂತದಲ್ಲಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರ




ಆಯ್ಕೆ ಪ್ರಕ್ರಿಯೆಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಲಾಗಿದೆ. ರಾಯಚೂರು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಸ್ಥಾನಕ್ಕೆ ಆರು ಮಂದಿ ಆಕಾಂಕ್ಷಿಗಳ ಪೈಕಿ ಮೂವರ ಹೆಸರನ್ನು ಅಂತಿಮ ಹಂತಕ್ಕೆ ಪರಿಗಣಿಸಲಾಗಿತ್ತು. ಬಳಿಕ ಪಕ್ಷದ ಮುಖಂಡರೊಂದಿಗೆ ಸಮಾಲೋಚನೆ ನಡೆಸಿ ಕೆ. ಶಾಂತಪ್ಪ ಅವರನ್ನು ಜಿಲ್ಲಾಧ್ಯಕ್ಷರನ್ನಾಗಿ ಆಯ್ಕೆ ಮಾಡಲಾಗಿದೆ ಎಂದು ವಿವರಿಸಿದರು.

ಎರಡನೇ ಹಂತದಲ್ಲಿ ಜಿಲ್ಲೆಯ ಪ್ರತಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ತಲಾ ಇಬ್ಬರಂತೆ ಒಟ್ಟು 14 ಬ್ಲಾಕ್ ಅಧ್ಯಕ್ಷರನ್ನು ನೇಮಕ ಮಾಡಲಾಗುವುದು. ಕೆಪಿಸಿಸಿ ಮಾರ್ಗಸೂಚಿಗಳ ಪ್ರಕಾರ ಪಕ್ಷದ ಹಿರಿಯ ಮುಖಂಡರು, ಹಾಲಿ ಹಾಗೂ ಮಾಜಿ ಜನಪ್ರತಿನಿಧಿಗಳು, ಸ್ಥಳೀಯ ಕಾರ್ಯಕರ್ತರು ಮತ್ತು ವಿವಿಧ ಸಮುದಾಯಗಳ ಪ್ರಮುಖರೊಂದಿಗೆ ಚರ್ಚಿಸಿ ಅರ್ಹರನ್ನು ಆಯ್ಕೆ

2ನೇ ಪುಟಕ್ಕೆ

## ಗಾಂಜಾ ಹಾವಳಿ ತಡೆಗಟ್ಟಿ ಸಾರ್ವಜನಿಕರಿಗೆ ರಕ್ಷಣೆ ಒದಗಿಸಿ: ಬಿಜೆಪಿ ಮುಖಂಡರ ಆಗ್ರಹ

ರಾಯಚೂರು, ಅ.25: ನಗರದಲ್ಲಿ ಗಾಂಜಾ ಸೇರಿದಂತೆ ಮಾದಕ ವಸ್ತುಗಳ ಅಕ್ರಮ ಮಾರಾಟ ಹೆಚ್ಚುತ್ತಿರುವ ಆರೋಪಗಳಿದ್ದು, ಇಂತಹ ಚಟುವಟಿಕೆಗಳಿಗೆ ಕಡಿವಾಣ ಹಾಕದಿದ್ದರೆ ಸಾರ್ವಜನಿಕರು ನೆಮ್ಮದಿಯಿಂದ ಜೀವನ ನಡೆಸುವುದು ಹೇಗೆ ಎಂದು ಪ್ರಶ್ನಿಸಿರುವ ಬಿಜೆಪಿ ಮುಖಂಡರು, ಕಾನೂನು ಸುವ್ಯವಸ್ಥೆ ಬಲಪಡಿಸಿ ನಾಗರಿಕರಿಗೆ ಸೂಕ್ತ ರಕ್ಷಣೆ ಒದಗಿಸುವಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಶು ಗಿರಿ ಅವರಿಗೆ ಮನವಿ ಸಲ್ಲಿಸಿದರು.

ನಗರದ ಎಲ್‌ಬಿಎಸ್ ಬಡಾವಣೆಯಲ್ಲಿ ಸಿಗರೇಟ್ ನೀಡುವ ವಿಚಾರಕ್ಕೆ ಸಂಬಂಧಿಸಿದಂತೆ ನಡೆದ ಜಗಳದಲ್ಲಿ ವ್ಯಾಪಾರಿ ನರಸಿಂಹ ಕೊಲೆಯಾಗಿರುವ ಘಟನೆ ಸಾರ್ವಜನಿಕರಲ್ಲಿ ಭಯದ ವಾತಾವರಣ ಸೃಷ್ಟಿಸಿದೆ. ಕ್ಷುಲ್ಲಕ ಕಾರಣಕ್ಕೆ ವ್ಯಕ್ತಿಯೊಬ್ಬನ ಪ್ರಾಣ ಹೋಗಿರುವುದು ಕಳವಳಕಾರಿ ಸಂಗತಿಯಾಗಿದ್ದು, ಇಂತಹ ಘಟನೆಗಳು ಮತ್ತೆ



ನಡೆಯದಂತೆ ಪೊಲೀಸ್ ಇಲಾಖೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು.

ರಾಯಚೂರು ನಗರದ ವಿವಿಧ ಬಡಾವಣೆಗಳಲ್ಲಿ ಗಾಂಜಾ ಹಾಗೂ ಇತರ ಮಾದಕ ವಸ್ತುಗಳ ಮಾರಾಟ ನಡೆಯುತ್ತಿರುವ ಬಗ್ಗೆ ದೂರುಗಳು ಕೇಳಿಬರುತ್ತಿವೆ. ಮಾದಕ ವಸ್ತುಗಳ ಅಮಲಿನಲ್ಲಿ ಕೆಲವರು ಸಾರ್ವಜನಿಕರೊಂದಿಗೆ ಅನುಚಿತವಾಗಿ ವರ್ತಿಸುವುದು, ವಿನಾಕಾರಣ ಜಗಳ ತೆಗೆಯುವುದು ಹಾಗೂ ಸಣ್ಣ ವ್ಯಾಪಾರಿಗಳಿಗೆ ಕಿರುಕುಳ ನೀಡುತ್ತಿರುವ ಆರೋಪಗಳಿವೆ. ಇಂತಹ ಚಟುವಟಿಕೆಗಳನ್ನು ಆರಂಭದಲ್ಲಿಯೇ ನಿಯಂತ್ರಿಸದಿದ್ದರೆ ಮುಂದಿನ ದಿನಗಳಲ್ಲಿ ಮತ್ತಷ್ಟು ಗಂಭೀರ ಘಟನೆಗಳು ಸಂಭವಿಸುವ ಸಾಧ್ಯತೆಯಿದೆ ಎಂದು ಆತಂಕ ವ್ಯಕ್ತಪಡಿಸಿದರು.

ನಗರದ ಸುಮಾರು 30ರಿಂದ 35 ಕೊಳೆಗೇರಿ ಪ್ರದೇಶಗಳಲ್ಲಿ ಅನೇಕ ಬಡ ಕುಟುಂಬಗಳು ಸಣ್ಣಪುಟ್ಟ ವ್ಯಾಪಾರ ಮಾಡಿಕೊಂಡು ಜೀವನ ಸಾಗಿಸುತ್ತಿವೆ. ದಿನದ ದುಡಿಮೆಯಿಂದ ಕುಟುಂಬ ನಿರ್ವಹಿಸುವ ವ್ಯಾಪಾರಿಗಳು ಭಯದ

2ನೇ ಪುಟಕ್ಕೆ

## ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲೂ ಪರಿಶಿಷ್ಟ ಜಾತಿಗಳಿಗೆ ರಾಜಕೀಯ ಒಳಮೀಸಲಾತಿ ಜಾರಿಗೊಳಿಸಿ: ವಕೀಲ ಎಸ್. ಮಾರಪ್ಪ ಆಗ್ರಹ

ರಾಯಚೂರು, ಅ.25: ಶಿಕ್ಷಣ ಮತ್ತು ಉದ್ಯೋಗ ಕ್ಷೇತ್ರಗಳಲ್ಲಿ ಜಾರಿಗೊಳಿಸಿರುವ ಒಳಮೀಸಲಾತಿ ಮಾದರಿಯಲ್ಲಿಯೇ ಗ್ರಾಮ ಪಂಚಾಯಿತಿ ಸೇರಿದಂತೆ ಪಂಚಾಯತ್ ರಾಜ್ ಹಾಗೂ ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲೂ ಪರಿಶಿಷ್ಟ ಜಾತಿಯ ವಿವಿಧ ಸಮುದಾಯಗಳಿಗೆ ರಾಜಕೀಯ ಒಳಮೀಸಲಾತಿ ಕಲ್ಪಿಸಬೇಕು ಎಂದು ದಲಿತ ಸಂಘಟನೆಗಳ ಒಕ್ಕೂಟದ ಪರವಾಗಿ ವಕೀಲ ಎಸ್. ಮಾರಪ್ಪ ರಾಜ್ಯ ಸರ್ಕಾರವನ್ನು ಒತ್ತಾಯಿಸಿದರು.

ನಗರದಲ್ಲಿ ಭಾನುವಾರ ಆಯೋಜಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಪರಿಶಿಷ್ಟ ಜಾತಿಯ ಎಲ್ಲ ಸಮುದಾಯಗಳಿಗೂ ರಾಜಕೀಯ ಅಧಿಕಾರದಲ್ಲಿ ನ್ಯಾಯಯುತ ಪಾಲು ದೊರೆಯಬೇಕಾದರೆ ಪ್ರವರ್ಗ-ಎ, ಪ್ರವರ್ಗ-ಬಿ ಮತ್ತು ಪ್ರವರ್ಗ-ಸಿ ಆಧಾರದಲ್ಲಿ ಒಳಮೀಸಲಾತಿ ವ್ಯವಸ್ಥೆಯನ್ನು ಜಾರಿಗೆ ತರುವುದು ಅನಿವಾರ್ಯವಾಗಿದೆ ಎಂದು ಹೇಳಿದರು.



ಪರಿಶಿಷ್ಟ ಜಾತಿಗಳ ಒಳಮೀಸಲಾತಿ ಕುರಿತು ಸುಪ್ರೀಂ ಕೋರ್ಟ್ 2024ರ ಆಗಸ್ಟ್ 1ರಂದು ಮಹತ್ವದ ತೀರ್ಪು ನೀಡಿದೆ. ಅದರಂತೆ ರಾಜ್ಯ ಸರ್ಕಾರ 2025ರ ಆಗಸ್ಟ್ 25ರಂದು ಒಳಮೀಸಲಾತಿ ಸಂಬಂಧ ಆದೇಶ ಹೊರಡಿಸಿತ್ತು. ಆದರೆ 2026ರ ಫೆಬ್ರವರಿ 27ರಂದು ಆ ಆದೇಶವನ್ನು ಹಿಂಪಡೆಯಲಾಯಿತು. ಬಳಿಕ ಮೇ 8 ಮತ್ತು 13ರಂದು ಕೈಗೊಂಡ ಕ್ರಮಗಳ ಅನ್ವಯ ಶಿಕ್ಷಣ ಹಾಗೂ ಉದ್ಯೋಗ ಕ್ಷೇತ್ರಗಳಲ್ಲಿ ಪ್ರವರ್ಗ-ಎಗೆ ಶೇ.5.25, ಪ್ರವರ್ಗ-ಬಿಗೆ ಶೇ.5.25 ಮತ್ತು ಪ್ರವರ್ಗ-ಸಿಗೆ ಶೇ.4.5ರಷ್ಟು ಮೀಸಲಾತಿ ನಿಗದಿಪಡಿಸಲಾಗಿದೆ ಎಂದು ವಿವರಿಸಿದರು.

ಶೈಕ್ಷಣಿಕ ಮತ್ತು ಉದ್ಯೋಗಾವಕಾಶಗಳಲ್ಲಿ ಒಳಮೀಸಲಾತಿ ಕಲ್ಪಿಸಿರುವ ಸರ್ಕಾರ, ರಾಜಕೀಯ ಕ್ಷೇತ್ರದಲ್ಲಿಯೂ ಅದೇ ಸಾಮಾಜಿಕ ನ್ಯಾಯದ ತತ್ವವನ್ನು ಅನುಸರಿಸಬೇಕು. ಸ್ಥಳೀಯ ಆಡಳಿತ ವ್ಯವಸ್ಥೆಯಲ್ಲಿ ಪರಿಶಿಷ್ಟ ಜಾತಿಯ ಎಲ್ಲ ವರ್ಗಗಳಿಗೂ ಸಮಾನ ಅವಕಾಶ ಸಿಗುವಂತೆ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಹಿಂದುಳಿದ ವರ್ಗಗಳಿಗೆ ಪ್ರವರ್ಗ-1, 2ಎ, 3ಎ ಹಾಗೂ 3ಬಿ ಆಧಾರದಲ್ಲಿ ಮೀಸಲಾತಿ ನೀಡಲಾಗುತ್ತಿದೆ. ಇದೇ ಮಾದರಿಯಲ್ಲಿ ಪರಿಶಿಷ್ಟ ಜಾತಿಯ

2ನೇ ಪುಟಕ್ಕೆ

## ಅ.26ರಂದು ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆ: ಅದ್ದೂರಿ ಮೆರವಣಿಗೆಗೆ ಸಿದ್ಧತೆ

ರಾಯಚೂರು, ಅ.25: ಜಿಲ್ಲಾಡಳಿತ ಹಾಗೂ ವಾಲ್ಮೀಕಿ ನಾಯಕ ಸಮಾಜದ ಸಂಯುಕ್ತ ಆಶ್ರಯದಲ್ಲಿ ಅಕ್ಟೋಬರ್ 26ರಂದು ಆದಿಕವಿ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಸಡಗರ, ಸಂಭ್ರಮದಿಂದ ಆಚರಿಸಲು ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಸಮಾಜದ ಮುಖಂಡ ಗಿರಿಯಪ್ಪ ನಾಯಕ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಭಾನುವಾರ ಆಯೋಜಿಸಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಹರ್ಷಿ ವಾಲ್ಮೀಕಿ ಅವರ ತತ್ವಾದರ್ಶಗಳು ಹಾಗೂ ಸಮಾಜಕ್ಕೆ ನೀಡಿದ ಕೊಡುಗೆಗಳನ್ನು ಸ್ಮರಿಸುವ ಉದ್ದೇಶದಿಂದ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಜಯಂತಿ ಅಂಗವಾಗಿ ಸೋಮವಾರ ಬೆಳಿಗ್ಗೆ 9 ಗಂಟೆಗೆ ನಗರದ ಮಹರ್ಷಿ ವಾಲ್ಮೀಕಿ ವೃತ್ತದಲ್ಲಿರುವ ಪ್ರತಿಮೆಗೆ ಗಣ್ಯರು, ಜಿಲ್ಲಾಡಳಿತದ ಅಧಿಕಾರಿಗಳು ಹಾಗೂ ಸಮಾಜದ ಮುಖಂಡರು ಪೂಜೆ ಸಲ್ಲಿಸಿ, ಪುಷ್ಪಮಾಲೆ ಅರ್ಪಿಸುವ ಮೂಲಕ



ಕಾರ್ಯಕ್ರಮಕ್ಕೆ ಚಾಲನೆ ನೀಡಲಿದ್ದಾರೆ ಎಂದು ವಿವರಿಸಿದರು.

ಬಳಿಕ ಮಹರ್ಷಿ ವಾಲ್ಮೀಕಿ ಅವರ ಭಾವಚಿತ್ರದ ಭವ್ಯ ಮೆರವಣಿಗೆ ನಡೆಯಲಿದ್ದು, ಸಾಂಪ್ರದಾಯಿಕ ಕುಂಭ-ಕಳಸಗಳೊಂದಿಗೆ ಸಮಾಜದ ಬಾಂಧವರು ಭಾಗವಹಿಸಲಿದ್ದಾರೆ. ವಾಲ್ಮೀಕಿ ವೃತ್ತದಿಂದ ಆರಂಭವಾಗುವ ಮೆರವಣಿಗೆಯು ಬಸವೇಶ್ವರ ವೃತ್ತದ ಮೂಲಕ ಆಶಾಪುರ ರಸ್ತೆಯಲ್ಲಿರುವ ಮಹರ್ಷಿ ವಾಲ್ಮೀಕಿ ಭವನಕ್ಕೆ ತಲುಪಲಿದೆ ಎಂದು ಹೇಳಿದರು.

ನವೀಕರಣಗೊಂಡಿರುವ ಮಹರ್ಷಿ ವಾಲ್ಮೀಕಿ ಭವನದಲ್ಲಿ ಜಯಂತಿಯ ಮುಖ್ಯ ಸಮಾರಂಭ ಆಯೋಜಿಸಲಾಗಿದೆ. ಕಾರ್ಯಕ್ರಮದಲ್ಲಿ ಮಹರ್ಷಿ ವಾಲ್ಮೀಕಿ ಅವರ ಜೀವನ ಚರಿತ್ರೆ, ಸಾಹಿತ್ಯ ಸಾಧನೆ, ಸಾಮಾಜಿಕ ಚಿಂತನೆ ಹಾಗೂ ಮಾನವೀಯ ಮೌಲ್ಯಗಳ ಕುರಿತು ವಿಶೇಷ ಉಪನ್ಯಾಸ ನಡೆಯಲಿದೆ. ಅವರ ಆದರ್ಶಗಳನ್ನು ಯುವಪೀಳಿಗೆಗೆ ಪರಿಚಯಿಸುವುದು ಕಾರ್ಯಕ್ರಮದ ಪ್ರಮುಖ ಉದ್ದೇಶವಾಗಿದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಶೈಕ್ಷಣಿಕ ಕ್ಷೇತ್ರದಲ್ಲಿ ಉತ್ತಮ ಸಾಧನೆ ಮಾಡಿದ ವಾಲ್ಮೀಕಿ ನಾಯಕ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗುರುತಿಸಿ ಪುರಸ್ಕರಿಸಲಾಗುವುದು. ಅಲ್ಲದೆ, ವಿವಿಧ ಕ್ಷೇತ್ರಗಳಲ್ಲಿ ಗಮನಾರ್ಹ ಸೇವೆ ಸಲ್ಲಿಸಿರುವ ಸಮಾಜದ ಮುಖಂಡರು ಹಾಗೂ ಸಾಧಕರನ್ನು ಸನ್ಮಾನಿಸಿ ಗೌರವಿಸಲಾಗುವುದು ಎಂದರು.

ಮಹರ್ಷಿ ವಾಲ್ಮೀಕಿ ಅವರು ತಮ್ಮ ಸಾಹಿತ್ಯದ ಮೂಲಕ

2ನೇ ಪುಟಕ್ಕೆ

## ನೇಕಾರ ಸಮುದಾಯಗಳ ಅಭಿವೃದ್ಧಿ ನಿಗಮಕ್ಕೆ ಅನುದಾನ ಒದಗಿಸಿ ಕಾರ್ಯಾರಂಭಕ್ಕೆ ಕ್ರಮ ಕೈಗೊಳ್ಳಿ: ಬಿ.ಎಸ್. ಸೋಮಶೇಖರ್

ರಾಯಚೂರು, ಅ.25: ಆರ್ಥಿಕ, ಶೈಕ್ಷಣಿಕ ಹಾಗೂ ರಾಜಕೀಯವಾಗಿ ಹಿಂದುಳಿದಿರುವ ನೇಕಾರ ಸಮುದಾಯಗಳ ಸರ್ವಾಂಗೀಣ ಪ್ರಗತಿಗೆ ರಾಜ್ಯ ಸರ್ಕಾರ ಹೆಚ್ಚಿನ ಆದ್ಯತೆ ನೀಡಬೇಕು. ಹಿಂದಿನ ಸರ್ಕಾರ ಘೋಷಿಸಿದ್ದ ಕರ್ನಾಟಕ ರಾಜ್ಯ ನೇಕಾರ ಸಮುದಾಯಗಳ ಅಭಿವೃದ್ಧಿ ನಿಗಮವನ್ನು ಕೂಡಲೇ ಕಾರ್ಯರೂಪಕ್ಕೆ ತಂದು, ಸಮರ್ಪಕ ಅನುದಾನ ಒದಗಿಸಬೇಕು ಎಂದು ಕರ್ನಾಟಕ ರಾಜ್ಯ ನೇಕಾರ ಸಮುದಾಯಗಳ ಒಕ್ಕೂಟದ ರಾಜ್ಯಾಧ್ಯಕ್ಷ ಬಿ.ಎಸ್. ಸೋಮಶೇಖರ್ ಒತ್ತಾಯಿಸಿದರು.

ನಗರದಲ್ಲಿ ಭಾನುವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯಾದ್ಯಂತ ಸುಮಾರು 50ರಿಂದ 60 ಸಾವಿರ ನೇಕಾರ ಕುಟುಂಬಗಳು ವಾಸಿಸುತ್ತಿದ್ದು, ಬಹುತೇಕ ಕುಟುಂಬಗಳು ಸಾಂಪ್ರದಾಯಿಕ ನೇಕಾರಿಕೆ ವೃತ್ತಿಯನ್ನೇ ನಂಬಿ ಜೀವನ ನಡೆಸುತ್ತಿವೆ. ಆರ್ಥಿಕ ಸಂಕಷ್ಟದಿಂದಾಗಿ ಅನೇಕ



ಕುಟುಂಬಗಳು ಮೂಲಸೌಕರ್ಯಗಳಿಂದ ವಂಚಿತವಾಗಿವೆ. ಇಂತಹ ಕುಟುಂಬಗಳ ಬದುಕಿಗೆ ಭದ್ರತೆ ಒದಗಿಸಲು ಸರ್ಕಾರ ವಿಶೇಷ ಯೋಜನೆಗಳನ್ನು ರೂಪಿಸಬೇಕಾಗಿದೆ ಎಂದು ಹೇಳಿದರು.

ನೇಕಾರ ಸಮುದಾಯಗಳ ಅಭಿವೃದ್ಧಿಗಾಗಿ ಪ್ರತ್ಯೇಕ ನಿಗಮ ಸ್ಥಾಪಿಸಬೇಕೆಂಬುದು ಹಲವು ವರ್ಷಗಳ ಬೇಡಿಕೆಯಾಗಿದೆ. ಒಕ್ಕೂಟದ ನಿರಂತರ ಒತ್ತಾಯದ ಹಿನ್ನೆಲೆಯಲ್ಲಿ ಅಂದಿನ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಕರ್ನಾಟಕ ರಾಜ್ಯ ನೇಕಾರ ಸಮುದಾಯಗಳ ಅಭಿವೃದ್ಧಿ ನಿಗಮ ಸ್ಥಾಪಿಸುವುದಾಗಿ ಘೋಷಿಸಿದ್ದರು. ಆದರೆ ಘೋಷಣೆ ಮಾಡಿದ್ದನ್ನು ಹೊರತುಪಡಿಸಿದರೆ ಇದುವರೆಗೂ ನಿಗಮದ ಕಾರ್ಯಚಟುವಟಿಕೆಗಳು ಆರಂಭವಾಗಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ನಿಗಮದ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೂ ಮನವಿ ಸಲ್ಲಿಸಲಾಗಿತ್ತು. ಆದರೂ ನೇಕಾರ ಸಮುದಾಯದ ಬಹುದಿನಗಳ ಬೇಡಿಕೆ ಈಡೇರಿಲ್ಲ. ಪ್ರಸ್ತುತ ರಾಜ್ಯ ಸರ್ಕಾರ ಹಾಗೂ ಸಂಬಂಧಪಟ್ಟ ಇಲಾಖೆಯ ಸಚಿವರು ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ, ನಿಗಮಕ್ಕೆ ಅಗತ್ಯ ಹಣಕಾಸಿನ ನೆರವು ಒದಗಿಸುವ

2ನೇ ಪುಟಕ್ಕೆ

## ವಿಶ್ವ ಪಾರಂಪರಿಕ ತಾಣಗಳ ಸಂರಕ್ಷಣೆ ಪರಿಶೀಲಿಸಿದ ಯುನೆಸ್ಕೋ ಉನ್ನತ ಮಟ್ಟದ ತಂಡ







ಕೊಪ್ಪಳ, ಅ.25: ಕೊಪ್ಪಳ ಜಿಲ್ಲೆಯ ಐತಿಹಾಸಿಕ ಆನೆಗೊಂದಿ, ಅಂಜನಾದ್ರಿ ಬೆಟ್ಟ ಹಾಗೂ ವಿಜಯನಗರ ಜಿಲ್ಲೆಯ ಹಂಪಿ ಸೇರಿದಂತೆ ಸುತ್ತಮುತ್ತಲಿನ ವಿಶ್ವ ಪಾರಂಪರಿಕ ತಾಣಗಳ ಸಂರಕ್ಷಣೆ ಮತ್ತು ಅಭಿವೃದ್ಧಿ ಯೋಜನೆಗಳ ಅನುಷ್ಠಾನ ಪರಿಶೀಲಿಸಲು ಯುನೆಸ್ಕೋದ ಉನ್ನತ ಮಟ್ಟದ ಉಸ್ತುವಾರಿ ತಂಡ ಭಾನುವಾರ ಕೊಪ್ಪಳ ಜಿಲ್ಲೆಗೆ ಭೇಟಿ ನೀಡಿತು.

ಹಂಪಿ ವಿಶ್ವ ಪಾರಂಪರಿಕ ಪ್ರದೇಶದ ವ್ಯಾಪ್ತಿಯಲ್ಲಿರುವ ಐತಿಹಾಸಿಕ ಸ್ಮಾರಕಗಳ ಸಂರಕ್ಷಣೆ, ಮಾಸ್ಟರ್ ಪ್ಲಾನ್ ಅನುಷ್ಠಾನ ಹಾಗೂ ಪಾರಂಪರಿಕ ಪ್ರದೇಶಗಳ ನಿರ್ವಹಣೆಗೆ ಸಂಬಂಧಿಸಿದಂತೆ ತಂಡವು ಸ್ಥಳ ಪರಿಶೀಲನೆ ನಡೆಸಿತು.

ವಿಶೇಷವಾಗಿ ಆನೆಗೊಂದಿ ಹಾಗೂ ಅಂಜನಾದ್ರಿ ಬೆಟ್ಟದ ಸುತ್ತಮುತ್ತಲಿನ ಐತಿಹಾಸಿಕ ಪ್ರದೇಶಗಳು, ಪಾರಂಪರಿಕ ಸ್ಮಾರಕಗಳು ಮತ್ತು ಬಫರ್ ಜೋನ್ ವ್ಯಾಪ್ತಿಯಲ್ಲಿರುವ ಪ್ರದೇಶಗಳಿಗೆ ಭೇಟಿ ನೀಡಿ ಅಲ್ಲಿನ ವಸ್ತುಸ್ಥಿತಿಯನ್ನು ಅವಲೋಕಿಸಿತು.

ಈ ಸಂದರ್ಭದಲ್ಲಿ ಕೊಪ್ಪಳ ಮತ್ತು ವಿಜಯನಗರ ಜಿಲ್ಲಾಡಳಿತ, ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆ ಹಾಗೂ ಹಂಪಿ ವಿಶ್ವ ಪಾರಂಪರಿಕ ಪ್ರದೇಶ ನಿರ್ವಹಣಾ ಪ್ರಾಧಿಕಾರದ ಅಧಿಕಾರಿಗಳು ತಂಡಕ್ಕೆ ಸ್ಮಾರಕಗಳ ಸಂರಕ್ಷಣೆಗೆ ಕೈಗೊಂಡಿರುವ ಕ್ರಮಗಳು, ಅಭಿವೃದ್ಧಿ ಯೋಜನೆಗಳು ಹಾಗೂ ಮಾಸ್ಟರ್ ಪ್ಲಾನ್ ಅನುಷ್ಠಾನದ ಕುರಿತು ಮಾಹಿತಿ ನೀಡಿದರು.

ಸ್ಥಳ ಪರಿಶೀಲನೆಯ ಬಳಿಕ ಯುನೆಸ್ಕೋ ತಂಡವು ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಐತಿಹಾಸಿಕ ಸ್ಮಾರಕಗಳ ಸಂರಕ್ಷಣೆ, ಪಾರಂಪರಿಕ ಪ್ರದೇಶಗಳ ನಿರ್ವಹಣೆ ಹಾಗೂ ಅಭಿವೃದ್ಧಿ ಚಟುವಟಿಕೆಗಳಿಗೆ ಸಂಬಂಧಿಸಿದ ವಿವಿಧ ವಿಷಯಗಳ ಕುರಿತು ಚರ್ಚಿಸಿತು.

ವಿಶ್ವ ಪಾರಂಪರಿಕ ತಾಣಗಳ ಐತಿಹಾಸಿಕ ಮಹತ್ವವನ್ನು ಉಳಿಸುವ ನಿಟ್ಟಿನಲ್ಲಿ ಕೈಗೊಳ್ಳಲಾಗುತ್ತಿರುವ ಸಂರಕ್ಷಣಾ ಕ್ರಮಗಳು ಹಾಗೂ ಸಂಬಂಧಪಟ್ಟ ಇಲಾಖೆಗಳ ಕಾರ್ಯಚಟುವಟಿಕೆಗಳ ಕುರಿತು ತಂಡವು ಮಾಹಿತಿ ಪಡೆದುಕೊಂಡಿತು.

ಈ ಸಂದರ್ಭದಲ್ಲಿ ಕೊಪ್ಪಳ ಜಿಲ್ಲಾಧಿಕಾರಿ ಡಾ. ಸುರೇಶ ಇಟ್ನಾಳ, ವಿಜಯನಗರ ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ, ಕೊಪ್ಪಳ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಾಹಿಲ್ ಬಾಗ್ಲಾ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

**ಅಮೃತ ವಾಣಿ**

ನಿನ್ನ ಒಳ ಮನಸ್ಸನ್ನು ಬದಲಾಯಿಸು ಆಗ ನಿನ್ನ ಜಗತ್ತು ಬದಲಾಗುತ್ತದೆ.

**1628 ನೇಯ ದಿನಕ್ಕೆ ಏಮ್ಸ್ ಹೋರಾಟ**

## ಶಾಲಾ ಅವಧಿಗೆ ತೊಂದರೆಯಾಗದಂತೆ ಎಚ್‌ಪಿಎಲ್ ಕ್ರಿಕೆಟ್ ಪಂದ್ಯಾವಳಿ ನಡೆಸಲು ಅವಕಾಶ ನೀಡುವಂತೆ ಮನವಿ



ಜಾಲಹಳ್ಳಿ: ಪಟ್ಟಣದ ಬಾಲಕರ ಹಿರಿಯ ಪ್ರಾಥಮಿಕ ಶಾಲೆಯ ಆವರಣದಲ್ಲಿರುವ ಮೈದಾನದಲ್ಲಿ ಪ್ರತಿವರ್ಷದಂತೆ ಈ ಬಾರಿಯೂ ಆಯೋಜಿಸಿರುವ ಎಚ್‌ಪಿಎಲ್ (ಹೊರಟ್ಟಿ ಪ್ರೀಮಿಯರ್ ಲೀಗ್) ಕ್ರಿಕೆಟ್ ಪಂದ್ಯಾವಳಿಗೆ ಅಡ್ಡಿಪಡಿಸದೆ, ಕ್ರೀಡಾಕೂಟ ಮುಂದುವರಿಸಲು ಅವಕಾಶ ಕಲ್ಪಿಸಬೇಕೆಂದು ಸ್ಥಳೀಯ ಯುವಕರು ಹಾಗೂ ಕ್ರೀಡಾಪಟುಗಳು ಒತ್ತಾಯಿಸಿದ್ದಾರೆ.

ಪಟ್ಟಣದಲ್ಲಿ ಹಲವು ವರ್ಷಗಳಿಂದ ಹೊರಟ್ಟಿ ಪ್ರೀಮಿಯರ್ ಲೀಗ್ ಕ್ರಿಕೆಟ್ ಪಂದ್ಯಾವಳಿಯನ್ನು ನಡೆಸಿಕೊಂಡು ಬರಲಾಗುತ್ತಿದೆ. ಯುವಕರಲ್ಲಿ ಕ್ರೀಡಾಸಕ್ತಿ ಬೆಳೆಸುವುದು, ದೈಹಿಕ ಸಾಮರ್ಥ್ಯ ಹೆಚ್ಚಿಸುವುದು ಹಾಗೂ ಪರಸ್ಪರ ಸ್ನೇಹಭಾವ ಮೂಡಿಸುವ ಉದ್ದೇಶದಿಂದ ಈ ಪಂದ್ಯಾವಳಿಯನ್ನು ಆಯೋಜಿಸಲಾಗುತ್ತಿದೆ. ಆದರೆ, ಈ ಬಾರಿ ಕೆಲವರು ಅನಗತ್ಯವಾಗಿ ಪಂದ್ಯಾವಳಿ ನಡೆಸಲು ಅಡ್ಡಿಪಡಿಸುತ್ತಿದ್ದಾರೆ ಎಂದು ಸ್ಥಳೀಯರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಶಾಲೆಗೆ ಭೇಟಿ ನೀಡಿದ ಇಸಿಒ ನರೇಶ್ ಅವರಿಗೆ ಸ್ಥಳೀಯರು ಹಾಗೂ ಕ್ರೀಡಾಪಟುಗಳು ಮನವಿ ಸಲ್ಲಿಸಿ, ಪಂದ್ಯಾವಳಿ ನಡೆಸಲು ಅವಕಾಶ ನೀಡುವಂತೆ ಕೋರಿದರು.

ಶಾಲೆಯ ಶೈಕ್ಷಣಿಕ ಚಟುವಟಿಕೆಗಳಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಮುನ್ನೆಚ್ಚರಿಕೆ ವಹಿಸಲಾಗುವುದು. ಪ್ರತಿದಿನ ಬೆಳಿಗ್ಗೆ ಶಾಲೆ ಆರಂಭವಾಗುವ ಮೊದಲೇ ಕ್ರಿಕೆಟ್ ಪಂದ್ಯಗಳನ್ನು ಪೂರ್ಣಗೊಳಿಸಲಾಗುವುದು. ವಿದ್ಯಾರ್ಥಿಗಳ ಪಾಠಪ್ರವಚನ, ಶಾಲೆಯ ಶಿಸ್ತು ಹಾಗೂ ದೈನಂದಿನ ಚಟುವಟಿಕೆಗಳಿಗೆ ಅಡಚಣೆಯಾಗದಂತೆ ಪಂದ್ಯಾವಳಿ ನಡೆಸುವುದಾಗಿ ಕ್ರೀಡಾಪಟುಗಳು ಭರವಸೆ ನೀಡಿದರು.

ಯುವಕರನ್ನು ಕ್ರೀಡಾ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ಪ್ರೋತ್ಸಾಹಿಸುವ ಇಂತಹ ಪಂದ್ಯಾವಳಿಗಳಿಗೆ ಸಂಬಂಧಪಟ್ಟ ಅಧಿಕಾರಿಗಳು ಸಹಕಾರ ನೀಡಬೇಕು. ಅನಗತ್ಯ ಅಡ್ಡಿಗಳಿಗೆ ಅವಕಾಶ ನೀಡದೆ ಪಂದ್ಯಾವಳಿ ಸುಗಮವಾಗಿ ನಡೆಯಲು ಅನುಕೂಲ ಮಾಡಿಕೊಡಬೇಕೆಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ದುರುಗಪ್ಪ ಹೊರಟ್ಟಿ, ಬಸವರಾಜ ನಾಯಕ ಲಿಂಗದಹಳ್ಳಿ, ಮೌನೇಶ ದಾಸರ, ಅನುಮಂತ ಮಡಿವಾಳ, ಅಮ್ಮಣ್ಣ, ರಂಗನಾಥ ವಂದಲಿ ಸೇರಿದಂತೆ ಸ್ಥಳೀಯ ಯುವಕರು ಹಾಗೂ ಕ್ರೀಡಾಪಟುಗಳು ಉಪಸ್ಥಿತರಿದ್ದರು.

## ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲೂ ಪರಿಶಿಷ್ಟ ಜಾತಿಗಳಿಗೆ ರಾಜಕೀಯ ಒಳಮೀಸಲಾತಿ ಜಾರಿಗೊಳಿಸಿ: ವಕೀಲ ಎಸ್. ಮಾರಪ್ಪ ಆಗ್ರಹ

ಸಮುದಾಯಗಳಿಗೂ ಪ್ರತ್ಯೇಕ ರಾಜಕೀಯ ಒಳಮೀಸಲಾತಿ ಒದಗಿಸಿದರೆ ರಾಜಕೀಯವಾಗಿ ಹಿಂದುಳಿದಿರುವ ಸಮುದಾಯಗಳಿಗೂ ಅಧಿಕಾರದಲ್ಲಿ ಪಾಲ್ಗೊಳ್ಳಲು ಅವಕಾಶ ದೊರೆಯಲಿದೆ ಎಂದು ಅಭಿಪ್ರಾಯಪಟ್ಟರು.

ಗ್ರಾಮೀಣ ಭಾಗದಲ್ಲಿ ಹೊಲೆಯ ಮತ್ತು ಮಾದಿಗ ಸಮುದಾಯಗಳ ಅಭ್ಯರ್ಥಿಗಳು ರಾಜಕೀಯ ಪ್ರಾಬಲ್ಯ ಹೊಂದಿರುವ ಸಮುದಾಯಗಳ ಪ್ರಭಾವದಿಂದ ಚುನಾವಣೆಯಲ್ಲಿ ಹಿನ್ನಡೆ ಅನುಭವಿಸುತ್ತಿದ್ದಾರೆ. ಇದರಿಂದ ಅರ್ಹ ಅಭ್ಯರ್ಥಿಗಳಿಗೆ ಸೂಕ್ತ ಪ್ರಾತಿನಿಧ್ಯ ದೊರೆಯುತ್ತಿಲ್ಲ. ಪ್ರತಿ ಗ್ರಾಮ ಪಂಚಾಯಿತಿ ಚುನಾವಣೆಯಲ್ಲಿ ಪರಿಶಿಷ್ಟ ಜಾತಿಯ ಅಭ್ಯರ್ಥಿಗಳು ಸುಮಾರು 20ರಿಂದ 25 ಸ್ಥಾನಗಳನ್ನು ಕಳೆದುಕೊಳ್ಳುವ ಪರಿಸ್ಥಿತಿ ಎದುರಾಗುತ್ತಿದೆ ಎಂದು ಆರೋಪಿಸಿದರು.

1993ರಲ್ಲಿ ಜಾರಿಗೆ ಬಂದ ಪಂಚಾಯತ್ ರಾಜ್ ವ್ಯವಸ್ಥೆಯ ಮೂಲ ಉದ್ದೇಶವೇ ಸಮಾಜದ ಎಲ್ಲ ವರ್ಗಗಳಿಗೂ ಆಡಳಿತದಲ್ಲಿ ಭಾಗವಹಿಸುವ ಅವಕಾಶ ಕಲ್ಪಿಸುವುದಾಗಿದೆ. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗಗಳು ಹಾಗೂ ಮಹಿಳೆಯರಿಗೆ ರಾಜಕೀಯ ಮೀಸಲಾತಿ ಒದಗಿಸಿರುವಂತೆಯೇ ಪರಿಶಿಷ್ಟ ಜಾತಿಯೊಳಗಿನ ವಿವಿಧ ಸಮುದಾಯಗಳಿಗೂ ನ್ಯಾಯಯುತ ಪ್ರಾತಿನಿಧ್ಯ ಸಿಗುವ ವ್ಯವಸ್ಥೆ ರೂಪಿಸಬೇಕಾಗಿದೆ ಎಂದರು.

2026-27ನೇ ಸಾಲಿನಲ್ಲಿ ನಡೆಯಲಿರುವ ಪಂಚಾಯಿತಿ ಹಾಗೂ ಸ್ಥಳೀಯ ಸಂಸ್ಥೆಗಳ ಚುನಾವಣೆಗೂ ಮುನ್ನವೇ ಪ್ರವರ್ಗ-ಎಗೆ ಶೇ.5.25, ಪ್ರವರ್ಗ-ಬಿಗೆ ಶೇ.5.25 ಹಾಗೂ ಪ್ರವರ್ಗ-ಸಿಗೆ ಶೇ.4.5ರಷ್ಟು ರಾಜಕೀಯ ಒಳಮೀಸಲಾತಿ ಕಲ್ಪಿಸುವ ಕುರಿತು ಸರ್ಕಾರ ಸ್ಪಷ್ಟ ಆದೇಶ ಹೊರಡಿಸಬೇಕು. ಈ ವಿಷಯದಲ್ಲಿ ವಿಳಂಬ ಮಾಡದೆ ಸಾಮಾಜಿಕ ನ್ಯಾಯ ಮತ್ತು ರಾಜಕೀಯ ಸಮಾನತೆಯನ್ನು ಕಾಪಾಡುವ ನಿಟ್ಟಿನಲ್ಲಿ ತಕ್ಷಣ ನಿರ್ಧಾರ ಕೈಗೊಳ್ಳಬೇಕು ಎಂದು ಎಸ್. ಮಾರಪ್ಪ ಒತ್ತಾಯಿಸಿದರು.

ಪತ್ರಿಕಾಗೋಷ್ಠಿಯಲ್ಲಿ ದಲಿತ ಸಂಘಟನೆಗಳ ಮುಖಂಡರಾದ ಹೇಮರಾಜ್ ಆಸ್ಕಿಹಾಳ್, ರವೀಂದ್ರನಾಥ ಪಟ್ಟಿ, ಎಂ.ಆರ್. ಬೇರಿ, ಶರಣಪ್ಪ ದಿನ್ನಿ, ನರಸಿಂಹಲು ಮರ್ಚೆಟಹಾಳ್, ಆಂಜಿನಯ್ಯ ಉಟ್ಕೂರು, ನರಸಿಂಹಲು ನೆಲಹಾಳ್, ಶ್ರೀನಿವಾಸ ಕೊಪ್ಪರ, ತಾಯಪ್ಪ ಗಧಾರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಅ.26ರಂದು ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆ: ಅದ್ಧೂರಿ ಮೆರವಣಿಗೆಗೆ ಸಿದ್ಧತೆ

ಮಾನವೀಯತೆ, ಧರ್ಮ, ಸತ್ಯ ಹಾಗೂ ನೈತಿಕ ಮೌಲ್ಯಗಳನ್ನು ಸಾರಿದ್ದಾರೆ. ಅವರ ಜೀವನ ಸಂದೇಶ ಇಂದಿನ ಸಮಾಜಕ್ಕೂ ಮಾರ್ಗದರ್ಶಕವಾಗಿದೆ. ಜಯಂತಿ ಆಚರಣೆ ಕೇವಲ ಒಂದು ಸಮುದಾಯಕ್ಕೆ ಸೀಮಿತವಾಗದೆ ಎಲ್ಲರೂ ಒಗ್ಗಟ್ಟಿನಿಂದ ಪಾಲ್ಗೊಳ್ಳುವ ಕಾರ್ಯಕ್ರಮವಾಗಬೇಕು ಎಂದು ಗಿರಿಯಪ್ಪ ನಾಯಕ ಅಭಿಪ್ರಾಯಪಟ್ಟರು.

ಜಿಲ್ಲೆಯ ವಿವಿಧ ಭಾಗಗಳಿಂದ ಸಮಾಜದ ಮುಖಂಡರು, ಯುವಕರು, ಮಹಿಳೆಯರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಮೆರವಣಿಗೆ ಮತ್ತು ಸಭಾ ಕಾರ್ಯಕ್ರಮದಲ್ಲಿ ಭಾಗವಹಿಸುವ ಮೂಲಕ ಜಯಂತಿಯನ್ನು ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ಪತ್ರಿಕಾಗೋಷ್ಠಿಯಲ್ಲಿ ಡಾ. ಪ್ರಭು ಹುಲಿನಾಯಕ, ಡಾ. ಶಾರದ ಹುಲಿ ನಾಯಕ, ಎನ್. ರಘುವೀರ ನಾಯಕ, ತಿಮ್ಮಪ್ಪ ನಾಯಕ, ರಾಮು ನಾಯಕ ಗಂಜ್, ತಿಮ್ಮಪ್ಪ ನಿಯರಿ ನಾಯಕ, ರಾಮ ನಾಯಕ ಸಿಂಗನೋಡಿ, ರಾಮು ನಾಯಕ ಅಸ್ಕಿಹಾಳ, ವೆಂಕಟೇಶ ಮಲ್ಲಿಕಾರ್ಜುನ ಸೇರಿದಂತೆ ಸಮಾಜದ ಪ್ರಮುಖರು ಉಪಸ್ಥಿತರಿದ್ದರು.

## ನೇಕಾರ ಸಮುದಾಯಗಳ ಅಭಿವೃದ್ಧಿ ನಿಗಮಕ್ಕೆ ಅನುದಾನ ಒದಗಿಸಿ ಕಾರ್ಯಾರಂಭಕ್ಕೆ ಕ್ರಮ ಕೈಗೊಳ್ಳಿ: ಬಿ.ಎಸ್. ಸೋಮಶೇಖರ್

ಮೂಲಕ ನೇಕಾರರ ಆರ್ಥಿಕ ಸ್ವಾವಲಂಬನೆಗೆ ಪೂರಕವಾದ ಕಾರ್ಯಕ್ರಮಗಳನ್ನು ಜಾರಿಗೊಳಿಸಬೇಕು ಎಂದು ಆಗ್ರಹಿಸಿದರು.

ರಾಜ್ಯದ ಪ್ರತಿಯೊಂದು ಜಿಲ್ಲಾ ಕೇಂದ್ರದಲ್ಲಿಯೂ ದೇವರ ದಾಸಿಮಯ್ಯ ನೇಕಾರ ಸಮುದಾಯ ಭವನ ನಿರ್ಮಾಣಕ್ಕೆ ಸಿ.ಎ. ನಿವೇಶನ ಮಂಜೂರು ಮಾಡಬೇಕು. ಸಮುದಾಯದ ಸಭೆ, ಸಮಾರಂಭ ಹಾಗೂ ಸಾಮಾಜಿಕ ಚಟುವಟಿಕೆಗಳಿಗೆ ಅನುಕೂಲವಾಗುವಂತೆ ಭವನಗಳ ನಿರ್ಮಾಣಕ್ಕೆ ಸರ್ಕಾರ ಸಹಕಾರ ನೀಡಬೇಕು. ಅಲ್ಲದೆ, ಸ್ವಂತ ಮನೆ ಇಲ್ಲದೆ ಸಂಕಷ್ಟ ಅನುಭವಿಸುತ್ತಿರುವ ಬಡ ನೇಕಾರ ಕುಟುಂಬಗಳಿಗೆ ವಸತಿ ಸೌಲಭ್ಯ ಕಲ್ಪಿಸಲು ಕನಿಷ್ಠ ಎರಡು ಎಕರೆ ಜಮೀನು ಮೀಸಲಿಡಬೇಕು ಎಂದು ಒತ್ತಾಯಿಸಿದರು.

ನೇಕಾರ ಸಮುದಾಯವು ರಾಜಕೀಯ ಕ್ಷೇತ್ರದಲ್ಲಿಯೂ ಸೂಕ್ತ ಪ್ರಾತಿನಿಧ್ಯದಿಂದ ವಂಚಿತವಾಗಿದೆ. ಮುಂಬರುವ ಪುರಸಭೆ, ನಗರಸಭೆ, ಮಹಾನಗರ ಪಾಲಿಕೆ, ತಾಲೂಕು ಪಂಚಾಯಿತಿ ಹಾಗೂ ಜಿಲ್ಲಾ ಪಂಚಾಯಿತಿ ಚುನಾವಣೆಗಳಲ್ಲಿ ಸಮುದಾಯದ ಅರ್ಹ ಅಭ್ಯರ್ಥಿಗಳಿಗೆ ರಾಜಕೀಯ ಪಕ್ಷಗಳು ಹೆಚ್ಚಿನ ಅವಕಾಶ ನೀಡಬೇಕು. ಸ್ಥಳೀಯ ಆಡಳಿತದಲ್ಲಿ ನೇಕಾರ ಸಮುದಾಯದ ಪ್ರತಿನಿಧಿಗಳು ಆಯ್ಕೆಯಾಗುವ ಮೂಲಕ ಸಮುದಾಯದ ಸಮಸ್ಯೆಗಳಿಗೆ ಪರಿಣಾಮಕಾರಿಯಾಗಿ ಸ್ಪಂದಿಸಲು ಸಾಧ್ಯವಾಗಲಿದೆ ಎಂದು ಅಭಿಪ್ರಾಯಪಟ್ಟರು.

ನೇಕಾರರ ಸಮಸ್ಯೆಗಳಿಗೆ ಕೇವಲ ಭರವಸೆ ನೀಡುವುದರಿಂದ ಪರಿಹಾರ ದೊರೆಯುವುದಿಲ್ಲ. ಸರ್ಕಾರ ಘೋಷಿತ ಯೋಜನೆಗಳನ್ನು ಅನುಷ್ಠಾನಗೊಳಿಸುವುದರ ಜೊತೆಗೆ ಸಮುದಾಯದ ಶಿಕ್ಷಣ, ಉದ್ಯೋಗ, ವಸತಿ ಹಾಗೂ ಆರ್ಥಿಕ ಅಭಿವೃದ್ಧಿಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು. ಈ ನಿಟ್ಟಿನಲ್ಲಿ ಜಿಲ್ಲೆಯ ಸಚಿವರು ಮತ್ತು ಶಾಸಕರು ಸರ್ಕಾರದ ಗಮನ ಸೆಳೆದು ನೇಕಾರ ಸಮುದಾಯದ ಬೇಡಿಕೆಗಳನ್ನು ಈಡೇರಿಸಲು ಮುಂದಾಗಬೇಕು ಎಂದು ಬಿ.ಎಸ್. ಸೋಮಶೇಖರ್ ಮನವಿ ಮಾಡಿದರು.

ಪತ್ರಿಕಾಗೋಷ್ಠಿಯಲ್ಲಿ ಒಕ್ಕೂಟದ ಉಪಾಧ್ಯಕ್ಷ ಸಿ. ಚಂದ್ರಕಾಂತ್ ಬಂಡಾರಿ, ದಯಾನಂದ ಶೆಟ್ಟಿಗಾರ, ಜಿ. ನಾಗರಾಜ ಮಾನ್ವಿ, ಹೊನ್ನಾಲ ವೆಂಕಟೇಶ್, ಪಿ. ಗೋವಿಂದರಾಜ, ದತ್ತಾತ್ರೇಯ ವಲಕಂದಿನ್ನಿ ಹಾಗೂ ಮಹಿಳಾ ಘಟಕದ ಅಧ್ಯಕ್ಷೆ ಪುಷ್ಪ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಮೊದಲನೇ ಪುಟದಿಂದ

## ಪಾಟ್ನಾದಲ್ಲಿ ಖರ್ಗೆ ಭಾಷಣದ ವೇಳೆ ಗದ್ದಲ: ಪ್ರಧಾನಿ ಮೋದಿ ಹಾಗೂ ಬಿಜೆಪಿ ವಿರುದ್ಧ ತೀವ್ರ ವಾಗ್ದಾಳಿ

ಸುಧಾರಣೆಗೆ ಶ್ರಮಿಸಿದ್ದರು. ದೀರ್ಘಕಾಲ ಬಿಹಾರದ ಜನತೆಗೆ ಸೇವೆ ಸಲ್ಲಿಸಿದ ಅವರ ಆಡಳಿತ ಜನಪರವಾಗಿತ್ತು ಎಂದು ಹೇಳಿದರು.

ಮೀಸಲಾತಿ ಹಾಗೂ ಕ್ಷೇತ್ರ ಪುನರ್ವಿಂಗಡಣೆಯ ವಿಷಯಗಳನ್ನೂ ಪ್ರಸ್ತಾಪಿಸಿದ ಖರ್ಗೆ, ಮೀಸಲಾತಿಗೆ ಸಂಬಂಧಿಸಿದ ಪ್ರಮುಖ ನಿರ್ಧಾರಗಳನ್ನು ಸಂಸತ್ತಿನಲ್ಲಿಯೇ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ತಮ್ಮ ವೈಯಕ್ತಿಕ ಜೀವನದ ಸಂಕಷ್ಟಗಳನ್ನು ನೆನಪಿಸಿಕೊಂಡ ಖರ್ಗೆ, ತಾವು ಆರು ವರ್ಷದವರಾಗಿದ್ದಾಗ ತಮ್ಮ ಮನೆಗೆ ಬೆಂಕಿ ಹಚ್ಚಲಾಗಿತ್ತು. ಆ ಘಟನೆಯಲ್ಲಿ ತಾಯಿ ಮತ್ತು ಸಹೋದರಿಯನ್ನು ಕಳೆದುಕೊಂಡಿದ್ದು, ತಂದೆಯ ಆಶ್ರಯದಲ್ಲಿ ಬೆಳೆದಿದ್ದಾಗಿ ಭಾವುಕರಾಗಿ ವಿವರಿಸಿದರು.

ಪ್ರಸ್ತುತ ತಮ್ಮ ಮಗನಿಗೂ ಬೆದರಿಕೆಗಳು ಬರುತ್ತಿವೆ. ಇಂತಹ ಬೆದರಿಕೆಗಳ ಮೂಲಕ ತಮ್ಮನ್ನು ಮಣಿಸಲು ಪ್ರಯತ್ನಿಸಲಾಗುತ್ತಿದೆ. ಆದರೆ, ಜೀವನದಲ್ಲಿ ಅನೇಕ ಸಂಕಷ್ಟಗಳನ್ನು ಎದುರಿಸಿರುವ ತಾವು ಯಾವುದೇ ಬೆದರಿಕೆಗೂ ಹೆದರುವುದಿಲ್ಲ ಎಂದು ಖರ್ಗೆ ಸ್ಪಷ್ಟಪಡಿಸಿದರು.

ಒಟ್ಟಾರೆ, ಪಾಟ್ನಾದಲ್ಲಿ ನಡೆದ ಕಾರ್ಯಕ್ರಮದಲ್ಲಿ ಖರ್ಗೆ ಅವರು ಪ್ರಧಾನಿ ಮೋದಿ, ಬಿಜೆಪಿ, ಆರ್‌ಎಸ್‌ಎಸ್, ಚುನಾವಣಾ ಆಯೋಗ ಹಾಗೂ ಬಿಹಾರ ಸರ್ಕಾರದ ವಿರುದ್ಧ ಮಾಡಿದ ಆರೋಪಗಳು ಮತ್ತು ವಿವಾದಾತ್ಮಕ ಹೇಳಿಕೆಗಳು ರಾಜಕೀಯ ಚರ್ಚೆಗೆ ಕಾರಣವಾಗಿವೆ.

## ನ. 10ರೊಳಗೆ ಜಿಲ್ಲೆಯ 14 ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರ ಆಯ್ಕೆ ಪೂರ್ಣ: ರಾಜಶೇಖರ ಪಾಟೀಲ್

ಮಾಡಲಾಗುವುದು ಎಂದರು.

ಅಧ್ಯಕ್ಷರ ನೇಮಕಾತಿ ಪೂರ್ಣಗೊಂಡ ಬಳಿಕ ಬ್ಲಾಕ್ ಮಟ್ಟದ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಗುವುದು. ಈ ಪ್ರಕ್ರಿಯೆಯಲ್ಲಿ ಎಲ್ಲ ಜಾತಿ, ಧರ್ಮ ಹಾಗೂ ಸಮುದಾಯಗಳಿಗೆ ಸೂಕ್ತ ಪ್ರಾತಿನಿಧ್ಯ ನೀಡಲು ಆದ್ಯತೆ ನೀಡಲಾಗುತ್ತದೆ. ಜಿಲ್ಲೆಯ ಗ್ರಾಮಗಳಿಗೆ ಭೇಟಿ ನೀಡಿ ಪಕ್ಷದ ಕಾರ್ಯಕರ್ತರ ಅಭಿಪ್ರಾಯ ಸಂಗ್ರಹಿಸಲಾಗುವುದು. ಸಂಘಟನೆಯಲ್ಲಿ ಸಕ್ರಿಯವಾಗಿ ದುಡಿಯುವವರಿಗೆ ಹೆಚ್ಚಿನ ಅವಕಾಶ ಕಲ್ಪಿಸಲಾಗುವುದು ಎಂದು ತಿಳಿಸಿದರು.

ಕೆಪಿಸಿಸಿ ಉಪಾಧ್ಯಕ್ಷ ಜಾನ್ ವೆಸ್ಲಿ ಮಾತನಾಡಿ, ಸಂಘಟನ್ ಸೃಜನ್ ಅಭಿಯಾನದ ಮೊದಲ ಹಂತದಲ್ಲಿ ಎಲ್ಲ ಜಾತಿ, ಧರ್ಮ ಹಾಗೂ ಸಮುದಾಯಗಳ ಮುಖಂಡರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಜಿಲ್ಲಾ ಮಟ್ಟದಲ್ಲಿ ಸಂಘಟನೆಯನ್ನು ಬಲಪಡಿಸುವ ಕೆಲಸ ಮಾಡಲಾಗಿದೆ. ಮೊದಲ ಹಂತದ ಅಭಿಯಾನ ಯಶಸ್ವಿಯಾಗಿ ಪೂರ್ಣಗೊಂಡಿದ್ದು, ಇದೀಗ ಎರಡನೇ ಹಂತದಲ್ಲಿ ಹೊಸ ಮುಖಗಳಿಗೆ ಅವಕಾಶ ಕಲ್ಪಿಸುವ ಉದ್ದೇಶ ಹೊಂದಲಾಗಿದೆ ಎಂದರು.

ಪಕ್ಷದಲ್ಲಿ ದೀರ್ಘಕಾಲದಿಂದ ಸೇವೆ ಸಲ್ಲಿಸುತ್ತಿರುವ ಕಾರ್ಯಕರ್ತರ ಜೊತೆಗೆ ಹೊಸದಾಗಿ ಸಂಘಟನೆಯಲ್ಲಿ ತೊಡಗಿಸಿಕೊಳ್ಳಲು ಆಸಕ್ತಿ ಹೊಂದಿರುವವರಿಗೂ ಅಧ್ಯಕ್ಷ ಸ್ಥಾನ ಸೇರಿದಂತೆ ವಿವಿಧ ಜವಾಬ್ದಾರಿಗಳನ್ನು ನೀಡಲು ಚಿಂತನೆ ನಡೆಸಲಾಗಿದೆ. ಯುವಕರು, ಮಹಿಳೆಯರು ಹಾಗೂ ಎಲ್ಲ ವರ್ಗದ ಜನರನ್ನು ಪಕ್ಷದ ಮುಖ್ಯವಾಹಿನಿಗೆ ತರುವ ಮೂಲಕ ಕಾಂಗ್ರೆಸ್ ಸಂಘಟನೆಯನ್ನು ಮತ್ತಷ್ಟು ಸದೃಢಗೊಳಿಸಲಾಗುವುದು ಎಂದು ಹೇಳಿದರು.

ಆರಂಭದಲ್ಲಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಕೆ. ಶಾಂತಪ್ಪ ಮಾತನಾಡಿ, ಜಿಲ್ಲೆಯ ಏಳು ವಿಧಾನಸಭಾ ಕ್ಷೇತ್ರಗಳಲ್ಲಿ ಒಟ್ಟು 14 ಬ್ಲಾಕ್ ಅಧ್ಯಕ್ಷರ ಆಯ್ಕೆಗೆ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ. ಪಕ್ಷದ ರಾಜ್ಯ ನಾಯಕತ್ವದ ಸೂಚನೆಯಂತೆ ಎಲ್ಲ ಮುಖಂಡರ ಸಹಕಾರದೊಂದಿಗೆ ಆಯ್ಕೆ ಪ್ರಕ್ರಿಯೆ ನಡೆಸಲಾಗುವುದು ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಸಂಸದ ಕುಮಾರ ನಾಯಕ್, ಕಾಂಗ್ರೆಸ್ ಮುಖಂಡರಾದ ಜಯಣ್ಣ, ಶ್ರೀನಿವಾಸ್ ರೆಡ್ಡಿ, ಡಾ. ರಝಾಕ್ ಉಸ್ತಾದ್, ಸಾಜಿದ್ ಸಮೀರ್, ನರಸಿಂಹಲು ಮಡಗಿರಿ, ಶಿವಮೂರ್ತಿ, ನಿರ್ಮಲಾ ಬೆಣ್ಣೆ, ಪ್ರತಿಭಾ ರೆಡ್ಡಿ ಸೇರಿದಂತೆ ಪಕ್ಷದ ಹಲವು ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

## ಗ್ರಾಮೀಣ ಜನರ ಆರೋಗ್ಯ ರಕ್ಷಣೆಗೆ ಸರ್ಕಾರದಿಂದ ಹಲವು ಯೋಜನೆಗಳ ಅನುಷ್ಠಾನ: ಎನ್.ಎಸ್. ಬೋಸರಾಜು

ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಲಾಗುವುದು. ಇದರಿಂದ ಪೋತ್ನಾಳ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಜನರಿಗೆ ಉತ್ತಮ ಆರೋಗ್ಯ ಸೇವೆಗಳು ಲಭ್ಯವಾಗಲಿವೆ ಎಂದು ಹೇಳಿದರು.

ಇತ್ತೀಚಿನ ದಿನಗಳಲ್ಲಿ ಗ್ರಾಮೀಣ ಪ್ರದೇಶಗಳಲ್ಲಿಯೂ ವೈದ್ಯರು ಸೇವೆ ಸಲ್ಲಿಸಲು ಮುಂದೆ ಬರುತ್ತಿರುವುದು ಆಶಾದಾಯಕ ಬೆಳವಣಿಗೆಯಾಗಿದೆ. ಪೋತ್ನಾಳದ ಡಾ. ಗುರುಶರ್ಮಾ ಹಾಗೂ ಸಿಂಧನೂರಿನ ಡಾ. ಶರಣಬಸವ ದೇವರೆಡ್ಡಿ ಅವರು ಬೆಂಗಳೂರಿನ ತಜ್ಞ ವೈದ್ಯರ ತಂಡದ ಸಹಕಾರದೊಂದಿಗೆ ಉಚಿತ ಆರೋಗ್ಯ ತಪಾಸಣಾ ಶಿಬಿರ ಆಯೋಜಿಸಿರುವುದು ಶ್ಲಾಘನೀಯ. ತಮ್ಮ ಬಿಡುವಿನ ಸಮಯವನ್ನು ಜನರ ಆರೋಗ್ಯ ಸೇವೆಗೆ ಮೀಸಲಿಡುತ್ತಿರುವ ವೈದ್ಯರ ಕಾರ್ಯ ಇತರರಿಗೂ ಮಾದರಿಯಾಗಿದೆ ಎಂದರು.

ರಕ್ತದಾನವು ಅಮೂಲ್ಯ ಜೀವಗಳನ್ನು ಉಳಿಸುವ ಮಹತ್ವದ ಕಾರ್ಯವಾಗಿದ್ದು, ಯುವಜನರು ಸ್ವಯಂಪ್ರೇರಣೆಯಿಂದ ಹೆಚ್ಚಿನ ಸಂಖ್ಯೆಯಲ್ಲಿ ರಕ್ತದಾನ ಮಾಡಲು ಮುಂದಾಗಬೇಕು. ತುರ್ತು ಸಂದರ್ಭಗಳಲ್ಲಿ ರಕ್ತದ ಕೊರತೆಯಿಂದ ಯಾವುದೇ ಜೀವಹಾನಿಯಾಗದಂತೆ ರಕ್ತನಿಧಿಗಳಲ್ಲಿ ಅಗತ್ಯ ಪ್ರಮಾಣದ ರಕ್ತ ಸಂಗ್ರಹವಾಗಲು ಪ್ರತಿಯೊಬ್ಬರೂ ಸಹಕರಿಸಬೇಕು ಎಂದು ಕರೆ ನೀಡಿದರು.

ಶಾಸಕ ಹಂಪಯ್ಯ ನಾಯಕ ಮಾತನಾಡಿ, ಗ್ರಾಮೀಣ ಪ್ರದೇಶಗಳಲ್ಲಿ ಇಂತಹ ಉಚಿತ ಆರೋಗ್ಯ ಶಿಬಿರಗಳ ಆಯೋಜನೆಯಿಂದ ಆರ್ಥಿಕವಾಗಿ ಹಿಂದುಳಿದ ಕುಟುಂಬಗಳಿಗೆ ಅನುಕೂಲವಾಗಲಿದೆ ಎಂದರು.

ಅಡವಿ ಅಮರೇಶ್ವರ ಸುವರ್ಣಗಿರಿ ಮಠದ ತೋಟಾಂದರ್ಯ ಮಹಾಸ್ವಾಮಿಗಳು ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಆರೋಗ್ಯ ಶಿಬಿರದಲ್ಲಿ ಪೋತ್ನಾಳದ ಶಾರದಾ ಆಸ್ಪತ್ರೆಯ ಡಾ. ಗುರುಶರ್ಮಾ, ಸಿಂಧನೂರಿನ ಶ್ರೀ ಗವಿಸಿದ್ದೇಶ್ವರ ಆಸ್ಪತ್ರೆಯ ಡಾ. ಶರಣಬಸವ ದೇವರೆಡ್ಡಿ, ಡಾ. ನಾಗಭೂಷಣ, ಡಾ. ಅಶೋಕರಡ್ಡಿ, ಕ್ಯಾನ್ಸರ್ ತಜ್ಞೆ ಡಾ. ಬಿಂದು ಬ್ರೈಟ್, ಡಾ. ಶ್ರೀಕಾಂತ ವಲಸಪಲ್ಲಿ, ಡಾ. ಶೃತಿ, ಡಾ. ಅನಿಲ್ ಕುಮಾರ್, ಡಾ. ಚಂದ್ರಶೇಖರ್ ಎಂ. ಸಾಗರ್, ಡಾ. ನವೀನ್, ಡಾ. ರಾಜಶೇಖರ ಧರ್ಮಾಯತ್, ಡಾ. ಶರಣಬಸವ ಕುಲಕರ್ಣಿ, ಡಾ. ಪೂಜಾ ಪಾಟೀಲ್, ನೇತ್ರಾಧಿಕಾರಿ ವೆಂಕಟೇಶ, ಡಾ. ವೀರೇಶ ಹಾಗೂ ಡಾ. ಬಸವರಾಜಪ್ಪ ಸೇರಿದಂತೆ ವಿವಿಧ ವಿಭಾಗಗಳ ತಜ್ಞ ವೈದ್ಯರು ನೂರಾರು ರೋಗಿಗಳ ಆರೋಗ್ಯ ತಪಾಸಣೆ ನಡೆಸಿ ಅಗತ್ಯ ಚಿಕಿತ್ಸೆ ಮತ್ತು ಸಲಹೆ ನೀಡಿದರು.

ಶಿಬಿರದಲ್ಲಿ ರೋಗಿಗಳಿಗೆ ಉಚಿತ ಇಸಿಜಿ ಹಾಗೂ ಎಕೋ ಪರೀಕ್ಷೆಗಳನ್ನು ನಡೆಸಲಾಯಿತು. ಇದೇ ಸಂದರ್ಭದಲ್ಲಿ ಆಯೋಜಿಸಿದ್ದ ಸ್ವಯಂಪ್ರೇರಿತ ರಕ್ತದಾನ ಶಿಬಿರದಲ್ಲಿ ರಕ್ತದಾನಿಗಳು ಭಾಗವಹಿಸಿ ರಕ್ತದಾನ ಮಾಡಿದರು.

ಕಾರ್ಯಕ್ರಮದಲ್ಲಿ ನಯೋಪ್ರಾ ಅಧ್ಯಕ್ಷ ಅಬ್ದುಲ್ ಗಫೂರ್ ಸಾಬ್, ಗ್ಯಾರಂಟಿ ಸಮಿತಿ ಅಧ್ಯಕ್ಷ ಬಿ.ಕೆ. ಅಮರೇಶಪ್ಪ, ದೊಡ್ಡಬಸಪ್ಪಗೌಡ ಭೋಗವತಿ, ಸೈಯದ್ ಖಾಲಿದ್ ಖಾದ್ರಿ, ರಾಜ ಸುಭಾಷ್ ಚಂದ್ರ ನಾಯಕ, ಮಲ್ಲಿಕಾರ್ಜುನ ಪಾಟೀಲ್ ಮೂಲಿಮನಿ, ಶರಣಯ್ಯ ನಾಯಕ ಗುಡದ್ದಿನ್ನಿ, ದೇವೇಂದ್ರಪ್ಪ, ಎಚ್. ಶರ್ಫುದ್ದೀನ್ ಪೋತ್ನಾಳ, ಸಿದ್ದಲಿಂಗಪ್ಪ ವಕೀಲರು, ವಸಂತ ಕೊಡ್ಲಿ, ಸತ್ತಾರ್ ಬಂಗ್ಲೆವಾಲೆ, ಹಂಪಯ್ಯ ನಾಯಕ, ಕಾಮೇಶ, ಮಂಜುನಾಥ ನಾಯಕ ಪೋತ್ನಾಳ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಗಾಂಜಾ ಹಾವಳಿ ತಡೆಗಟ್ಟಿ ಸಾರ್ವಜನಿಕರಿಗೆ ರಕ್ಷಣೆ ಒದಗಿಸಿ: ಬಿಜೆಪಿ ಮುಖಂಡರ ಆಗ್ರಹ

ವಾತಾವರಣದಲ್ಲಿ ಅಂಗಡಿ ನಡೆಸುವ ಪರಿಸ್ಥಿತಿ ಎದುರಾಗಬಾರದು. ವ್ಯಾಪಾರಿಗಳು, ಮಹಿಳೆಯರು, ಹಿರಿಯ ನಾಗರಿಕರು ಹಾಗೂ ಸಾರ್ವಜನಿಕರು ಸುರಕ್ಷಿತವಾಗಿ ಓಡಾಡುವಂತಹ ವಾತಾವರಣ ನಿರ್ಮಿಸುವುದು ಪೊಲೀಸ್ ಇಲಾಖೆಯ ಪ್ರಮುಖ ಜವಾಬ್ದಾರಿಯಾಗಿದೆ ಎಂದು ತಿಳಿಸಿದರು.

ನಗರದಲ್ಲಿ ಗಾಂಜಾ ಮಾರಾಟ ನಡೆಯುತ್ತಿರುವ ಸ್ಥಳಗಳನ್ನು ಗುರುತಿಸಿ ನಿರಂತರ ದಾಳಿ ನಡೆಸಬೇಕು. ಕೇವಲ ಮಾದಕ ವಸ್ತುಗಳನ್ನು ಸೇವಿಸುವವರ ವಿರುದ್ಧ ಕ್ರಮ ಕೈಗೊಳ್ಳುವುದಕ್ಕೆ ಸೀಮಿತವಾಗದೆ, ಅವುಗಳನ್ನು ಪೂರೈಸುವವರು, ಮಾರಾಟ ಮಾಡುವವರು ಹಾಗೂ ಇದರ ಹಿಂದಿರುವ ಜಾಲವನ್ನು ಪತ್ತೆಹಚ್ಚಬೇಕು. ಅಕ್ರಮ ಮಾದಕ ವಸ್ತುಗಳ ವ್ಯವಹಾರಕ್ಕೆ ಸಂಪೂರ್ಣ ಕಡಿವಾಣ ಹಾಕಲು ವಿಶೇಷ ಪೊಲೀಸ್ ತಂಡಗಳನ್ನು ರಚಿಸಿ ಕಾರ್ಯಾಚರಣೆ ನಡೆಸಬೇಕೆಂದು ಆಗ್ರಹಿಸಿದರು.

ಪೊಲೀಸ್ ಅಧಿಕಾರಿಗಳು ಯಾವುದೇ ರಾಜಕೀಯ ಒತ್ತಡಕ್ಕೆ ಒಳಗಾಗದೆ ನಿಷ್ಪಕ್ಷಪಾತವಾಗಿ ಕರ್ತವ್ಯ ನಿರ್ವಹಿಸಬೇಕು. ಅಪರಾಧ ಚಟುವಟಿಕೆಗಳಲ್ಲಿ ಭಾಗಿಯಾಗಿರುವವರು ಯಾರೇ ಆಗಿದ್ದರೂ ಕಾನೂನು ಪ್ರಕಾರ ಕ್ರಮ ಕೈಗೊಳ್ಳಬೇಕು. ನಗರದಲ್ಲಿ ಪೊಲೀಸ್ ಗಸ್ತು ಹೆಚ್ಚಿಸುವುದರ ಜೊತೆಗೆ ಸೂಕ್ಷ್ಮ ಪ್ರದೇಶಗಳಲ್ಲಿ ಹೆಚ್ಚಿನ ನಿಗಾ ವಹಿಸಬೇಕು ಎಂದು ಮನವಿ ಮಾಡಿದರು.

ಯುವಜನತೆ ಮಾದಕ ವಸ್ತುಗಳ ಚಟಕ್ಕೆ ಬಲಿಯಾಗದಂತೆ ಜಾಗೃತಿ ಮೂಡಿಸುವುದು ಅಗತ್ಯವಾಗಿದೆ. ಗಾಂಜಾ ಹಾವಳಿಯನ್ನು ನಿಯಂತ್ರಿಸುವಲ್ಲಿ ನಿರ್ಲಕ್ಷ್ಯ ವಹಿಸಿದರೆ ನಗರದ ಶಾಂತಿ ಮತ್ತು ಸಾರ್ವಜನಿಕ ಸುರಕ್ಷತೆಗೆ ಧಕ್ಕೆಯಾಗುವ ಆತಂಕವಿದೆ. ಎಲ್‌ಬಿಎಸ್ ಬಡಾವಣೆಯಲ್ಲಿ ನಡೆದ ನರಸಿಂಹ ಕೊಲೆ ಪ್ರಕರಣದ ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥರಿಗೆ ಕಾನೂನು ಪ್ರಕಾರ ಕಠಿಣ ಶಿಕ್ಷೆಯಾಗುವಂತೆ ಕ್ರಮ ಕೈಗೊಳ್ಳಬೇಕು ಎಂದು ಬಿಜೆಪಿ ಮುಖಂಡರು ಒತ್ತಾಯಿಸಿದರುರ್ದಲ್ಲಿ ಯುವ ಮುಖಂಡ ವಿನಾಯಕ ರಾವ್, ಬಿಜೆಪಿ ಮುಖಂಡರಾದ ಉಟ್ಕೂರು ರಾಘವೇಂದ್ರ, ರವೀಂದ್ರ ಜಲ್ದಾರ್, ಶಶಿರಾಜ್, ಕಡಗೋಲ ಆಂಜನೇಯ, ನಾಗರಾಜ ಪಲಗಲು ಸೇರಿದಂತೆ ಪಕ್ಷದ ಹಲವು ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಮಕ್ಕಳ ಭವಿಷ್ಯ ರೂಪಿಸುವಲ್ಲಿ ಅಂಗನವಾಡಿ ಕಾರ್ಯಕರ್ತೆಯರ ಪಾತ್ರ ಮಹತ್ವದ್ದು: ರವಿ ಜಾಪಾಂಡೆ



ಅರಕೇರಾ: ಮಕ್ಕಳ ಮನಸ್ಸನ್ನು ಪ್ರೀತಿ, ವಿಶ್ವಾಸದಿಂದ ಗೆದ್ದು ಅವರ ಉಜ್ವಲ ಭವಿಷ್ಯಕ್ಕೆ ಭದ್ರ ಬುನಾದಿ ಹಾಕುವ ಅಂಗನವಾಡಿ ಕಾರ್ಯಕರ್ತೆಯರು ನಿಜವಾದ ಶಿಲ್ಪಿಗಳು ಎಂದು ನಾಗಡದಿನ್ನಿ ಸರ್ಕಾರಿ ಹಿರಿಯ ಮಾದರಿ ಪ್ರಾಥಮಿಕ ಶಾಲೆಯ ಶಿಕ್ಷಕ ರವಿ ಜಾಪಾಂಡೆ ಅಭಿಪ್ರಾಯಪಟ್ಟರು.

ತಾಲೂಕಿನ ನಾಗಡದಿನ್ನಿ ಗ್ರಾಮದ ಅಂಗನವಾಡಿ ಕೇಂದ್ರ ಸಂಖ್ಯೆ 2ರಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ದೇವದುರ್ಗ ಶಿಶು ಅಭಿವೃದ್ಧಿ ಯೋಜನೆ ಹಾಗೂ ಅಜೀಂ ಪ್ರೇಮ್‌ಜಿ ಫೌಂಡೇಶನ್ ಸಹಯೋಗದಲ್ಲಿ ಆಯೋಜಿಸಿದ್ದ ಮಕ್ಕಳ ಮತ್ತು ಪೋಷಕರ ಕಲಿಕಾ ಸಭೆ (ಇಸಿಸಿಇ) ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಅಂಗನವಾಡಿ ಕೇಂದ್ರಗಳು ಕೇವಲ ಅಕ್ಷರ ಜ್ಞಾನ ಕಲಿಸುವ ಸ್ಥಳಗಳಲ್ಲ. ಮಕ್ಕಳಿಗೆ ಪ್ರೀತಿ, ಮಮತೆ ಹಾಗೂ ಉತ್ತಮ ಸಂಸ್ಕಾರ ನೀಡುವ ಕೇಂದ್ರಗಳಾಗಿವೆ. ಅಳುವ ಮಕ್ಕಳನ್ನು ನಗಿಸುತ್ತಾ, ಅವರಕೈಹಿಡಿದುಹೊರಜಗತ್ತನ್ನುಪರಿಚಯಿಸುವ ಅಂಗನವಾಡಿ ಕಾರ್ಯಕರ್ತೆಯರು ತಾಯಿಯ ಸ್ಥಾನದಲ್ಲಿ ನಿಂತು ಮಕ್ಕಳನ್ನು ಪೋಷಿಸುತ್ತಿದ್ದಾರೆ. ಅಂಗನವಾಡಿ ಕೇಂದ್ರಗಳು ದೇವಾಲಯಗಳಿದ್ದಂತೆ, ಅಲ್ಲಿನ ಮಕ್ಕಳೇ ದೇವರು. ಅವರ ಲಾಲನೆ, ಪಾಲನೆ ಮಾಡುವುದರ ಜೊತೆಗೆ ಪೌಷ್ಟಿಕ ಆಹಾರ ಒದಗಿಸಿ ಆರೋಗ್ಯಕರ ಬೆಳವಣಿಗೆಗೆ ಶ್ರಮಿಸುವುದು ಅತ್ಯಂತ ಪುಣ್ಯದ ಕಾರ್ಯವಾಗಿದೆ ಎಂದು ಹೇಳಿದರು.

ಅಂಗನವಾಡಿ ಕಾರ್ಯಕರ್ತೆ ದುರುಗಮ್ಮ ಮಾತನಾಡಿ, ಮಕ್ಕಳ ಸಮಗ್ರ ಬೆಳವಣಿಗೆ ಹಾಗೂ ಶೈಕ್ಷಣಿಕ ಪ್ರಗತಿಯಲ್ಲಿ ಪೋಷಕರ ಸಹಭಾಗಿತ್ವ ಅತ್ಯಂತ ಅಗತ್ಯವಾಗಿದೆ. ಮಕ್ಕಳ ಮತ್ತು ಪೋಷಕರ ಕಲಿಕಾ ಸಭೆಯು ಕೇವಲ ಶೈಕ್ಷಣಿಕ ಸಾಧನೆಗಳ ಚರ್ಚೆಗೆ ಸೀಮಿತವಾಗದೆ, ಮಕ್ಕಳ ಕಲಿಕೆ, ನಡವಳಿಕೆ, ಆಸಕ್ತಿ ಹಾಗೂ ಭಾವನಾತ್ಮಕ ಬೆಳವಣಿಗೆಯನ್ನು ಅರಿಯಲು ಉತ್ತಮ ಅವಕಾಶ ಕಲ್ಪಿಸುತ್ತದೆ ಎಂದರು.

ಮಕ್ಕಳ ಬಾಲ್ಯದ ಆರೈಕೆ ಮತ್ತು ಪೂರ್ವ ಪ್ರಾಥಮಿಕ ಶಿಕ್ಷಣವನ್ನು ಬಲಪಡಿಸುವ ಉದ್ದೇಶದಿಂದ ಇಸಿಸಿಇ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಅಂಗನವಾಡಿ ಕೇಂದ್ರಗಳ ಬಲವರ್ಧನೆ, ಗುಣಮಟ್ಟದ ಪೌಷ್ಟಿಕ ಆಹಾರ ಹಾಗೂ ಮಕ್ಕಳ ಕಲಿಕಾ ಸಾಮರ್ಥ್ಯ ಹೆಚ್ಚಿಸುವ ನಿಟ್ಟಿನಲ್ಲಿ ಅಜೀಂ ಪ್ರೇಮ್‌ಜಿ ಫೌಂಡೇಶನ್ ಸಹಕಾರ ನೀಡುತ್ತಿದೆ. ಸಮುದಾಯ ಆಧಾರಿತ ಚಟುವಟಿಕೆಗಳ ಮೂಲಕ ಮಕ್ಕಳಲ್ಲಿರುವ ಪ್ರತಿಭೆ, ಸೃಜನಶೀಲತೆ ಮತ್ತು ವಿವಿಧ ಕೌಶಲಗಳನ್ನು ಗುರುತಿಸಲು ಇಂತಹ ಕಾರ್ಯಕ್ರಮಗಳು ಸಹಕಾರಿಯಾಗಿವೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಮಕ್ಕಳ ಶೈಕ್ಷಣಿಕ ಸಾಮರ್ಥ್ಯ, ಕ್ರಿಯಾಶೀಲತೆ, ನಡವಳಿಕೆ, ಹವ್ಯಾಸಗಳು ಹಾಗೂ ಭಾವನಾತ್ಮಕ ಬೆಳವಣಿಗೆ ಕುರಿತು ಪೋಷಕರಿಗೆ ಮಾಹಿತಿ ನೀಡಲಾಯಿತು. ಮನೆಯಲ್ಲಿ ಮಕ್ಕಳಿಗೆ ಪೂರಕ ಕಲಿಕಾ ವಾತಾವರಣ ನಿರ್ಮಿಸುವುದು ಮತ್ತು ಅವರ ಕಲಿಕೆಯಲ್ಲಿ ಪೋಷಕರು ಸಕ್ರಿಯವಾಗಿ ಪಾಲ್ಗೊಳ್ಳುವ ಮಹತ್ವವನ್ನು ವಿವರಿಸಲಾಯಿತು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಸದಸ್ಯ ಶರಣಬಸವ, ಬಾಲ ವಿಕಾಸ ಸಮಿತಿ ಅಧ್ಯಕ್ಷೆ ಶೈಜಾದಿ ಬೇಗಂ, ಅಂಗನವಾಡಿ ಕಾರ್ಯಕರ್ತೆಯರಾದ ನಿರ್ಮಲಾ ಪಾಟೀಲ್, ಅನುಷಾ ಪಾಟೀಲ್, ಸಲೀಮಾ ಸೇರಿದಂತೆ ಮಕ್ಕಳ ತಾಯಂದಿರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಪುಟಾಣಿ ಮಕ್ಕಳು ವಿವಿಧ ವೇಷಭೂಷಣಗಳನ್ನು ಧರಿಸಿ ತಮ್ಮ ಪ್ರತಿಭೆ ಪ್ರದರ್ಶಿಸುವ ಮೂಲಕ ನೆರೆದಿದ್ದವರ ಗಮನ ಸೆಳೆದರು.

# ಎಜಿಬಿ ಕಾಲೋನಿ ಸಂಘದ ನೂತನ ಆಡಳಿತ ಮಂಡಳಿ ಆಯ್ಕೆ ಸಭೆ ನವೆಂಬರ್ 15ಕ್ಕೆ ಮುಂದೂಡಿಕೆ




ರಾಯಚೂರು: ನಗರದ ಮಂತ್ರಾಲಯ ರಸ್ತೆಯಲ್ಲಿರುವ ಪೂರ್ಣಿಮಾ ಇಂಟರ್ ನ್ಯಾಷನಲ್ ಶಾಲೆಯಲ್ಲಿ ಎಜಿಬಿ ಕಾಲೋನಿ ನಿವಾಸಿಗಳ ಸಂಘದ ವಾರ್ಷಿಕ ಸಾಮಾನ್ಯ ಸಭೆ ನಡೆಯಿತು. ಸಂಘದ ಆಡಳಿತ ಮಂಡಳಿ ಪುನರ್‌ರಚನೆ, ಕಳೆದ ಎರಡು ವರ್ಷಗಳ ಲೆಕ್ಕಪತ್ರಗಳ ಪರಿಶೀಲನೆ ಹಾಗೂ ಕಾಲೋನಿಯ ಮೂಲಸೌಕರ್ಯ ಸಮಸ್ಯೆಗಳ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

ಸಭೆಯಲ್ಲಿ ಮಾತನಾಡಿದ ಎಜಿಬಿ ಕಾಲೋನಿ ಸಂಘದ ಅಧ್ಯಕ್ಷ ಬಸವರಾಜ್, ಕಳೆದ ಎರಡು ವರ್ಷಗಳ ತಮ್ಮ ಅಧಿಕಾರಾವಧಿಯಲ್ಲಿ ಸಂಘದ ಎಲ್ಲ ಹಣಕಾಸು ವ್ಯವಹಾರಗಳನ್ನು ಸಂಪೂರ್ಣವಾಗಿ ಆನ್‌ಲೈನ್ ಮೂಲಕವೇ ನಡೆಸಲಾಗಿದ್ದು, ಯಾವುದೇ ನಗದು ವ್ಯವಹಾರಗಳಿಗೆ ಅವಕಾಶ ನೀಡಿಲ್ಲ. ಸಂಘದ ಆದಾಯ ಮತ್ತು ವೆಚ್ಚಗಳ ವಿವರಗಳನ್ನು ಪಾರದರ್ಶಕವಾಗಿ ನಿರ್ವಹಿಸಲಾಗಿದ್ದು, ಲೆಕ್ಕಪರಿಶೋಧನಾ ವರದಿ ಹಾಗೂ ಹಣಕಾಸು ವಿವರಗಳನ್ನು ಸದಸ್ಯರ ಮುಂದೆ ಮಂಡಿಸಲಾಗಿದೆ ಎಂದು ತಿಳಿಸಿದರು.

ಸಂಘದ ನಿಯಮಾವಳಿಯಂತೆ ಪ್ರತಿವರ್ಷ ನವೀಕರಣ ಪ್ರಕ್ರಿಯೆ ಕೈಗೊಳ್ಳಲಾಗುತ್ತಿದ್ದು, ಈ ಬಾರಿ ಸಂಪೂರ್ಣ ಹೊಸ ಆಡಳಿತ ಮಂಡಳಿಯನ್ನು ರಚಿಸುವ ಉದ್ದೇಶ ಹೊಂದಲಾಗಿದೆ. ಸಂಘದ ಮುಂದಿನ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ನಡೆಸಲು ಸದಸ್ಯರೆಲ್ಲರೂ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ರವೀಂದ್ರ ಜಲ್ದಾರ್, ಸಂಘದ ನಿಯಮ ಮತ್ತು ನಿಬಂಧನೆಗಳ ಪ್ರಕಾರ ಸಾಮಾನ್ಯ ಸಭೆಯಲ್ಲಿ ಶೇ.50ಕ್ಕಿಂತ ಹೆಚ್ಚು ಸದಸ್ಯರ ಹಾಜರಾತಿ ಅಗತ್ಯವಾಗಿದೆ. ಆದರೆ ನಿಗದಿತ ಸಂಖ್ಯೆಯ ಸದಸ್ಯರು ಸಭೆಗೆ ಹಾಜರಾಗದ ಹಿನ್ನೆಲೆಯಲ್ಲಿ ನೂತನ ಆಡಳಿತ ಮಂಡಳಿ ಆಯ್ಕೆ ಪ್ರಕ್ರಿಯೆಯನ್ನು ಮುಂದೂಡಲಾಗಿದೆ ಎಂದು ತಿಳಿಸಿದರು.

ನೂತನ ಆಡಳಿತ ಮಂಡಳಿ ಆಯ್ಕೆಗಾಗಿ ನವೆಂಬರ್ 15, 2026ರಂದು ಮತ್ತೊಮ್ಮೆ ಸಭೆ ನಡೆಸಲು ನಿರ್ಧರಿಸಲಾಗಿದ್ದು, ಸಂಘದ ಎಲ್ಲ ಸದಸ್ಯರಿಗೆ ಮುಂಚಿತವಾಗಿ ನೋಟಿಸ್ ನೀಡಲಾಗುವುದು. ಅಂದು ಹೆಚ್ಚಿನ ಸಂಖ್ಯೆಯಲ್ಲಿ ಸದಸ್ಯರು ಭಾಗವಹಿಸಿ ಹೊಸ ಆಡಳಿತ ಮಂಡಳಿ ರಚನೆಗೆ ಸಹಕರಿಸಬೇಕು ಎಂದು ಕೋರಿದರು.

ಸಭೆಯಲ್ಲಿ ಕಾಲೋನಿಯ ವಿವಿಧ ಸಮಸ್ಯೆಗಳ ಕುರಿತು ಚರ್ಚೆ ನಡೆಯಿತು. ವಿಶೇಷವಾಗಿ ಕುಡಿಯುವ ನೀರಿನ ಸಮಸ್ಯೆ ಪ್ರಮುಖವಾಗಿ ಪ್ರಸ್ತಾಪವಾಗಿದ್ದು, ನಿವಾಸಿಗಳಿಗೆ ಸಮರ್ಪಕ ನೀರು ಪೂರೈಕೆಯಾಗದಿರುವುದರಿಂದ ಎದುರಾಗುತ್ತಿರುವ ತೊಂದರೆಗಳ ಬಗ್ಗೆ ಸದಸ್ಯರು ಗಮನ ಸೆಳೆದರು. ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳುವ ಅಗತ್ಯವಿದೆ ಎಂಬ ಅಭಿಪ್ರಾಯ ವ್ಯಕ್ತವಾಯಿತು.

ಈ ಸಂದರ್ಭದಲ್ಲಿ ಕೇಶವ ರೆಡ್ಡಿ, ರಾಜುಗೌಡ, ನರಸಿಂಗಪ್ಪ, ನರಸಿಂಹಲು, ಫಿರೋಜ್ ಸೇರಿದಂತೆ ಎಜಿಬಿ ಕಾಲೋನಿ ಸಂಘದ ಸದಸ್ಯರು ಹಾಗೂ ನಿವಾಸಿಗಳು ಉಪಸ್ಥಿತರಿದ್ದರು.

# ಶೀಗಿ ಹುಣ್ಣಿಮೆ: ಭೂತಾಯಿಯ ಸೀಮಂತದ ದಿನ




ಭಾರತ ಕೃಷಿ ಪ್ರಧಾನ ದೇಶ. ನಾವು ದೇವರನ್ನು ಪೂಜಿಸುವಷ್ಟೇ ಸಹಜವಾಗಿ ಪಂಚಭೂತಗಳಾದ ಭೂಮಿ, ಅಗ್ನಿ, ವಾಯು, ನೀರು ಮತ್ತು ಆಕಾಶವನ್ನೂ ಪೂಜಿಸುತ್ತೇವೆ. ಅದರಲ್ಲಿಯೂ ಭೂಮಿ ನಮಗೆ ಹೆತ್ತ ತಾಯಿಯಷ್ಟೇ ಪೂಜ್ಯಳು. ಮಾತಾ ಭೂಮಿಃ ಪುತ್ರೋಽಹಂ ಪೃಥಿವ್ಯಾಃ ಎಂದು ನಮ್ಮ ಭೂಮಿ ಸೂಕ್ತದಲ್ಲಿ ಹೇಳಲಾಗಿದೆ. ಈ ಜಗತ್ತಿನ ಯಾವುದೇ ಮೂಲೆಯಲ್ಲಿದ್ದರೂ ನಾವು ಹುಟ್ಟಿದ, ಬೆಳೆದ, ನಡೆದಾಡುವ ಈ ಭೂಮಿ ನಮ್ಮ ಜನನಿ ಮತ್ತು ನಾವೆಲ್ಲರೂ ಆಕೆಯ ಮಕ್ಕಳು. ಆದ್ದರಿಂದಲೇ ನಮ್ಮ ಹಿರಿಯರು ಜನನೀ ಜನ್ಮಭೂಮಿಶ್ಚ ಸ್ವರ್ಗಾದಪಿ ಗರೀಯಸೀ ಎಂದು ಹೇಳಿದ್ದಾರೆ. ಅಂದರೆ, ನಾವು ಜನಿಸಿದ ಭೂಮಿ ನಮಗೆ ಸ್ವರ್ಗಕ್ಕಿಂತಲೂ ಶ್ರೇಷ್ಠವಾದುದು.

ಭೂಮಿಯೊಂದಿಗಿನ ನಮ್ಮ ಸಂಬಂಧ ತಾಯಿ-ಮಕ್ಕಳ ಸಂಬಂಧದಂತೆ ಎಂಬುದು ಹಲವು ವಿಧಗಳಲ್ಲಿ ವೇದ್ಯವಾಗುತ್ತದೆ. ಮುಂಜಾನೆ ತಾಯಂದಿರು ಎದ್ದೊಡನೆ ಬೆಳಗಾಗಿ ನಾ ಎದ್ದು ಯಾರ್ಯಾರ ನೆನೆಯಲಿ? ಎಳ್ಳು ಜೀರಿಗೆ ಬೆಳೆಯುವ ಭೂಮ್ತಾಯಿ, ಎದ್ದೊಂದು ಗಳಿಗೆ ನೆನೆದೇನ ಎಂದು ನೆಲ ಮುಟ್ಟಿ ನಮಸ್ಕರಿಸುತ್ತಾರೆ.

ಆಟವಾಡುವ ಪ್ರತಿಯೊಬ್ಬ ಕ್ರೀಡಾಪಟುವೂ ನೆಲವನ್ನು ಮುಟ್ಟಿ ನಮಸ್ಕರಿಸಿ, ಗೆಲುವಿಗಾಗಿ ಪ್ರಾರ್ಥಿಸಿ ತನ್ನ ಆಟವನ್ನು ಪ್ರಾರಂಭಿಸುತ್ತಾನೆ. ಆತನ ಎದುರಾಳಿಯೂ ಅದೇ ಭೂತಾಯಿಯನ್ನು, ಅಂದರೆ ನೆಲವನ್ನು ಮುಟ್ಟಿ ನಮಸ್ಕರಿಸುತ್ತಾನೆ. ಇದೇ ನಮ್ಮ ಭಾರತೀಯ ಪರಂಪರೆಯ ಸೊಗಡು. ಪರಸ್ಪರ ಎದುರಾಳಿಗಳಿಗೂ ಭೂತಾಯಿ ಮಾತೃಸ್ವರೂಪಳು.

ತನ್ನ ಹೊಲವನ್ನು ಉತ್ತುವ ರೈತ ಕೂಡ ಅಮ್ಮಾ, ಬಂಗಾರದಂತಹ ಬೆಳೆ ಕೊಡು ಎಂದು ಬೇಡಿಕೊಳ್ಳುತ್ತಾನೆ. ಇದು ನಮ್ಮ ಭಾರತೀಯ ಪರಂಪರೆಯ ಶ್ರೀಮಂತಿಕೆಯೂ ಹೌದು. ಭೂತಾಯಿಯೆಡೆಗಿನ ಶ್ರದ್ಧೆ ಅನನ್ಯ. ಅದು ಭಾವಕ್ಕೆ ನಿಲುಕದ್ದು, ಭಾವನಾತೀತವಾದುದು.

ನಮ್ಮ ಸಂಸ್ಕೃತ ಕಾವ್ಯಗಳಲ್ಲಿ ಮತ್ತು ಯೋಗದ ಪಠ್ಯಗಳಲ್ಲಿ,

ಸಮುದ್ರವಸನೇ ದೇವಿ ಪರ್ವತಸ್ತನಮಂಡಲೇ ।
ವಿಷ್ಣುಪತ್ನಿ ನಮಸ್ತುಭ್ಯಂ ಪಾದಸ್ಪರ್ಶಂ ಕ್ಷಮಸ್ವ ಮೇ ॥

ಎಂದು ಭೂತಾಯಿಯನ್ನು ಬೇಡಿಕೊಳ್ಳುತ್ತಾರೆ.

ಇದರ ತಾತ್ಪರ್ಯವಿಷ್ಟೇ: ಸಮುದ್ರವೇ ನಿನ್ನ ವಸ್ತ್ರ, ಪರ್ವತಗಳೇ ನಿನ್ನ ಸ್ತನಮಂಡಲಗಳು. ವಿಷ್ಣುಪತ್ನಿಯಾದ ಭೂತಾಯಿಯೇ, ನಾನು ನನ್ನ ಕೆಲಸಕಾರ್ಯಗಳಿಗಾಗಿ ನಿನ್ನನ್ನು ತುಳಿಯುತ್ತೇನೆ, ನಿನ್ನ ಮೇಲೆ ನಡೆದಾಡುತ್ತೇನೆ. ಆದ್ದರಿಂದ ನನ್ನನ್ನು ಕ್ಷಮಿಸು ತಾಯಿ ಎಂದು ಪ್ರಾರ್ಥಿಸುವುದು.

ಹೀಗೆ ಭೂಮಿ ಮತ್ತು ಮನುಷ್ಯನ ಸಂಬಂಧ ನಮ್ಮ ಭಾರತೀಯ ಸಂಪ್ರದಾಯದಲ್ಲಿ ತಾಯಿ-ಮಕ್ಕಳ ಸಂಬಂಧದಂತೆ ಹಾಸುಹೊಕ್ಕಾಗಿದೆ. ಅದರಲ್ಲಿಯೂ ರೈತನನ್ನು ಭೂತಾಯಿಯ ಚೊಚ್ಚಲ ಮಗ ಎಂದೇ ಕರೆಯುತ್ತಾರೆ.

ಭೂತಾಯಿ ನಮಗೆ ಜೀವನಕ್ಕೆ ಅವಶ್ಯಕವಾದ ಆಹಾರ ಮತ್ತು ನೀರನ್ನು ದಯಪಾಲಿಸುತ್ತಾಳೆ. ನಮ್ಮನ್ನು ತನ್ನ ಮಡಿಲಲ್ಲಿಟ್ಟು ಪೋಷಿಸುತ್ತಾಳೆ. ಮುಂದೆ ನಾವು ಮಡಿದ ಮೇಲೆಯೂ ಮತ್ತೆ ತನ್ನ ಉದರದಲ್ಲಿ ನಮಗೆ ಆಶ್ರಯ ನೀಡುತ್ತಾಳೆ.

ಶ್ರಾವಣ ಮಾಸದಿಂದ ದೀಪಾವಳಿಯವರೆಗೆ ನಮ್ಮ ಭಾರತೀಯ ಸಂಪ್ರದಾಯದಲ್ಲಿ ಹಬ್ಬಗಳ ಸಾಲುಸಾಲು ಮೆರವಣಿಗೆಯೇ ಹೊರಡುತ್ತದೆ. ಅದರಲ್ಲಿ ಶೀಗಿ ಹುಣ್ಣಿಮೆಯೂ ಒಂದು.

ದಸರೆಯ ನಂತರ ಆಶ್ವಯುಜ ಮಾಸದಲ್ಲಿ ಬರುವ ಹುಣ್ಣಿಮೆಯ ದಿನ ಬಯಲುಸೀಮೆಯ ಜನರು ಶೀಗಿ ಹುಣ್ಣಿಮೆಯನ್ನು ಆಚರಿಸುತ್ತಾರೆ. ಇದನ್ನು ಕರ್ನಾಟಕದ ಕೆಲವೆಡೆ ಭೂಮಿ ಹುಣ್ಣಿಮೆ ಎಂದೂ ಕರೆಯುತ್ತಾರೆ.

ಈ ಸಮಯದಲ್ಲಿ ಮಳೆಗಾಲ ಸ್ವಲ್ಪ ಹಿಂದೆ ಸರಿದು, ರೈತನ ಶ್ರಮಕ್ಕೆ ಪ್ರತಿಫಲವಾಗಿ ತುಂಬಿ ನಿಂತ ಪೈರು, ತೆನೆಗಳು ಕಣ್ಸೆಳೆಯುತ್ತಿರುತ್ತವೆ. ಹೊಲದ ಪ್ರತಿಯೊಂದು ಮೂಲೆಯೂ ಹಸಿರಿನಿಂದ ಕಂಗೊಳಿಸುತ್ತಿರುತ್ತದೆ. ಇನ್ನೇನು ಕೊಯ್ಲು ಮತ್ತು ರಾಶಿ ಮಾಡುವ ಕಾರ್ಯ ಆರಂಭವಾಗುವ ಕೆಲವೇ ದಿನಗಳ ಮುಂಚೆ, ಈ ದಿನದಂದು ರೈತನು ಭೂತಾಯಿಗೆ ಪೂಜೆ ಸಲ್ಲಿಸಿ ಸೀಮಂತದ ಊಟವನ್ನು ಬಡಿಸುತ್ತಾನೆ. ಜೊತೆಗೆ ತನ್ನ ಬಂಧುಬಾಂಧವರೊಡಗೂಡಿ ಹಬ್ಬದ ಊಟ ಮಾಡಿ ಸಂಭ್ರಮಿಸುತ್ತಾನೆ. ಇದನ್ನು ಉತ್ತರ ಕರ್ನಾಟಕದಲ್ಲಿ ಚರಗ ಚೆಲ್ಲುವುದು ಎಂದು ಕರೆಯುತ್ತಾರೆ.

ಶೀಗಿ ಹುಣ್ಣಿಮೆಗೆ ಹಲವಾರು ದಿನಗಳ ಮುಂಚೆಯೇ ಹಬ್ಬದ ತಯಾರಿ ಪ್ರಾರಂಭವಾಗುತ್ತದೆ. ರೈತರ ಮನೆಯೆಂದ ಮೇಲೆ ಅಂಕಿ-ಸಂಖ್ಯೆಗಳು ಮುಖ್ಯವಲ್ಲ, ಜನರ ಹೊಟ್ಟೆ ತುಂಬುವುದು ಮುಖ್ಯ.

ತೆಳ್ಳಗೆ ಎಳ್ಳು ಹಚ್ಚಿದ ಜೋಳ ಮತ್ತು ಸಜ್ಜೆಯ ರೊಟ್ಟಿಗಳು, ಬಗೆಬಗೆಯ ಚಟ್ನಿಪುಡಿಗಳು, ಕೆಂಪು ಹಿಂಡಿ, ಎಳ್ಳು ಹೋಳಿಗೆ, ಶೇಂಗಾ ಹೋಳಿಗೆ, ಎಣ್ಣೆ ಹೋಳಿಗೆ (ನವಣೆ ಅಕ್ಕಿಯನ್ನು ಹುರಿದು ಮಾಡುವ ಒಂದು ಸಿಹಿ ಪದಾರ್ಥ), ಕರ್ಚಿಕಾಯಿಗಳು ಮೊದಲೇ ತಯಾರಾಗುತ್ತವೆ.

ಹಬ್ಬದ ದಿನ ಎಣ್ಣೆ ಬದನೆಕಾಯಿ ಪಲ್ಯ, ಮೊಳಕೆ ಬರಿಸಿದ ಕಾಳುಗಳ ಪಲ್ಯ, ಕುದಿಸಿದ ಮೆಣಸಿನಕಾಯಿ ಪಲ್ಯ, ಪುಂಡಿ ಪಲ್ಯ, ಹಿಟ್ಟಿನ ಪಲ್ಯ, ಹಸಿಯಾಗಿಯೇ ತಿನ್ನಬಹುದಾದ ಈರುಳ್ಳಿ, ಸೌತೆಕಾಯಿ, ಗಜ್ಜರಿ, ಮೆಂತ್ಯ ಸೊಪ್ಪು ಮುಂತಾದವುಗಳನ್ನು ಸಿದ್ಧಪಡಿಸಲಾಗುತ್ತದೆ.

ಇದರ ಜೊತೆಗೆ ಭೂತಾಯಿಯ ಎಡೆಗಾಗಿ ಕುಚ್ಚಗಡಬು, ಸಜ್ಜೆ ಕಡುಬು, ಜೋಳದ ಕಡುಬು, ಚಿತ್ರಾನ್ನ, ಮೊಸರನ್ನದ ಬುತ್ತಿ, ಕರಿದ ಹಪ್ಪಳ, ಸಂಡಿಗೆ, ಮೆಣಸಿನಕಾಯಿ ಬಾಳಕಗಳು ಹೀಗೆ ಹಲವಾರು ಬಗೆಯ ಪದಾರ್ಥಗಳನ್ನು ತಯಾರಿಸಿ ಒಂದೊಂದೇ ಡಬ್ಬಗಳಲ್ಲಿ ಶೇಖರಿಸಲಾಗುತ್ತದೆ.

ಆ ಎಲ್ಲ ಡಬ್ಬಗಳನ್ನು ಶುದ್ಧವಾದ ಹಸಿ ವಸ್ತ್ರದಿಂದ ಒರೆಸಿ, ವಿಭೂತಿ ಪಟ್ಟಿಯನ್ನು ಬರೆದು, ಸಿಂಗರಿಸಿದ ಎತ್ತಿನ ಗಾಡಿಗಳಲ್ಲಿ ಹೇರಲಾಗುತ್ತದೆ.

ಹೆಂಗಳೆಯರು ಇಳಕಲ್ ಸೀರೆ, ಕುಪ್ಪಸ, ರೇಷ್ಮೆ ಸೀರೆಗಳನ್ನು ಧರಿಸಿ, ಬೋರಮಾಳ ಸರ, ಗುಂಡಿನ ಸರ, ಟೀಕಿ ಸರ, ಕಾಸಿನ ಸರ, ಗುಂಡುಹಚ್ಚಿನ ಸರ, ಪಾಟಲಿ, ಬಿಲವಾರ, ಹಸಿರು, ಕೆಂಪು ಮತ್ತು ಚುಕ್ಕಿಯ ಬಳೆಗಳನ್ನು ಧರಿಸಿ ಸೆರಗು ಹೊತ್ತು ಅಲಂಕರಿಸಿಕೊಳ್ಳುತ್ತಾರೆ.

ಇತ್ತೀಚಿನ ನೀರೆಯರು ನಾವೇನು ಕಡಿಮೆ ಎಂಬಂತೆ ಜರತಾರಿ ಸೀರೆಗಳೊಂದಿಗೆ ಹಳೆಯ ಸಾಂಪ್ರದಾಯಿಕ ಉಡುಗೆ-ತೊಡುಗೆಗಳನ್ನು ಧರಿಸಿ ಸಿದ್ಧರಾಗುತ್ತಾರೆ.

ಮಕ್ಕಳಿಗಂತೂ ಹಬ್ಬವೋ ಹಬ್ಬ! ತಂದೆ, ಅಜ್ಜಂದಿರಿಗೆ ದನಗಳನ್ನು ಹಳ್ಳಕ್ಕೆ ಕರೆದೊಯ್ದು ಸ್ನಾನ ಮಾಡಿಸಲು ಹಾಗೂ ಸಿಂಗರಿಸಲು ಅವರ ಸಹಾಯಹಸ್ತ ಇದ್ದೇ ಇರುತ್ತದೆ.

ದನಕರುಗಳನ್ನು ಹಳ್ಳಗಳಲ್ಲಿ ಮೀಯಿಸಿ, ಕೊಂಬುಗಳಿಗೆ ಬಣ್ಣ ಬಳಿದು, ಅವುಗಳ ಬೆನ್ನ ಮೇಲೆ ಜರತಾರಿ ಸೀರೆಯಿಂದ ತಯಾರಿಸಿದ ಅಂಗವಸ್ತ್ರಗಳನ್ನು ಹೊದಿಸಲಾಗುತ್ತದೆ. ಕೋಡಣಸು, ಕೊಂಬಿನ ಸರಗಳನ್ನು ಧರಿಸಿ, ಕೊಂಬುಗಳನ್ನು ಶೃಂಗರಿಸಿದ ನಂತರ ಎಲ್ಲರೂ ಭೂತಾಯಿಯ ಪೂಜೆ ಸಲ್ಲಿಸಲು ಹೊಲಕ್ಕೆ ಸಾಗುತ್ತಾರೆ.

ಒಟ್ಟಿನಲ್ಲಿ ಕಣ್ಣಿಗೆ ಹಬ್ಬದ ವಾತಾವರಣ, ಸಂಭ್ರಮ-ಸಡಗರದ ಕಳೆ. ಎತ್ತುಗಳ ಕೊರಳಲ್ಲಿರುವ ಗಂಟೆಯ ಝೇಂಕಾರ, ಚಕ್ಕಡಿ ಹೊಡೆಯುವವನ ಹುಂಕಾರ, ಮರದ ಗಾಲಿಯ ಕಿರುಗುಟ್ಟುವ ಶಬ್ದ, ಗಾಲಿಗೆ ಕೋಲಿಟ್ಟು ಸದ್ದು ಮಾಡುವ ರೀತಿ ಮನಮೋಹಕವಾಗಿರುತ್ತದೆ.

ಪ್ರತಿಯೊಬ್ಬ ರೈತನು ತನ್ನ ಹೊಲದಲ್ಲಿರುವ ಒಂದು ಅಚ್ಚುಕಟ್ಟಾದ ಜಾಗವನ್ನು, ಹೆಚ್ಚಾಗಿ ಬನ್ನಿ ಗಿಡವಿರುವ ಪ್ರದೇಶವನ್ನು ಸ್ವಚ್ಛಗೊಳಿಸುತ್ತಾನೆ. ಅಲ್ಲಿಯೇ ಜಮಖಾನೆ ಹಾಸಿ, ಬನ್ನಿ ಗಿಡದ ಕೆಳಗೆ ಐದು ಕಲ್ಲುಗಳನ್ನು ಪಂಚಪಾಂಡವರ ರೂಪದಲ್ಲಿ ಹಾಗೂ ಹಿಂದೆ ಕರ್ಣನ ಹೆಸರಿನಲ್ಲಿ (ಕೆಲವರು ಕಳ್ಳ ಎಂದು ಅಪಭ್ರಂಶ ಮಾಡಿದ್ದಾರೆ) ಇನ್ನೊಂದು ಕಲ್ಲನ್ನು ಪ್ರತಿಷ್ಠಾಪಿಸುತ್ತಾನೆ.

ಬಳಿಕ ಭೂತಾಯಿಯನ್ನು ಬನ್ನಿ ಮರದಲ್ಲಿ ಆವಾಹನೆ ಮಾಡಿ, ಪೂಜಿಸಿ, ಮಂಗಳಾರತಿ ಬೆಳಗಿ, ಕಾಯಿ ಒಡೆದು ನೈವೇದ್ಯ ಸಮರ್ಪಿಸುತ್ತಾನೆ.

ಚಂದ್ರಗಾವಿಯ ಸೀರಿ ಚಂದಾಕ ತಂದೀನಿ, ಭೂಮಿ ತಾಯವ್ವ ಉಡು ಬಾರ, ನಮ್ಮವ್ವ ರಾಶಿಗೆ ಹುಲಸು ಕೊಡು ಬಾರ, ಹಸಿರು ಸೀರಿ ಉಟ್ಟು ಬಸರಾದಳು, ಭೂತಾಯಿ ಬಸರಾದ ಅವಳ ನಡು, ಚಂದ ಮಲೆನಾಡ ಸೂಸುವ ಭತ್ತದಂಗ ಬಳುಕ್ಯಾಳು.

ಎಂದು ಭೂತಾಯಿಯನ್ನು ಕೊಂಡಾಡುತ್ತಾರೆ.

ಪಾಂಡವರನ್ನು ಪೂಜಿಸುವ ಹಿಂದೆಯೂ ಒಂದು ಕಥೆಯಿದೆ.

ಅಜ್ಞಾತವಾಸದಲ್ಲಿದ್ದ ಪಾಂಡವರು ಹಸಿವಿನಿಂದ ತತ್ತರಿಸುತ್ತಾ ಹೊಲದ ಬಳಿ ಬಂದಾಗ, ಅಲ್ಲಿ ರೈತ ದಂಪತಿಗಳು ಬನ್ನಿ ಮರದ ಕೆಳಗೆ ಭೂತಾಯಿಯ ಪೂಜೆ ಮಾಡಿ ಆಹಾರ ಸ್ವೀಕರಿಸಲು ಅಣಿಯಾಗಿರುತ್ತಾರೆ.

ಸಮಯಕ್ಕೆ ಸರಿಯಾಗಿ ಬಂದ ಅಭ್ಯಾಗತರನ್ನು ಸ್ವಾಗತಿಸಿದ ರೈತ ದಂಪತಿಗಳು ಅವರಿಗೆ ಊಟ ಬಡಿಸಲು ಮುಂದಾಗುತ್ತಾರೆ. ಆದರೆ, ತಟ್ಟೆ ಅಥವಾ ಎಲೆ ಇರುವುದಿಲ್ಲ. ಆಗ ಮಾರುವೇಷದಲ್ಲಿದ್ದ ಧರ್ಮರಾಜನು ಮೇಲಿದ್ದ ಬನ್ನಿ ಮರದ ಎಲೆಯನ್ನು ಹರಿದು, ಅದರಲ್ಲಿಯೇ ಊಟ ಬಡಿಸುವಂತೆ ದಂಪತಿಗಳನ್ನು ಕೇಳಿಕೊಳ್ಳುತ್ತಾನೆ.

ಅಷ್ಟು ಪುಟ್ಟ ಬನ್ನಿ ಎಲೆಯಲ್ಲಿ ಆಹಾರ ಹಿಡಿಸುವುದೇ ಎಂದು ಸೋಜಿಗದಿಂದ ರೈತ ದಂಪತಿಗಳು ಬಡಿಸುತ್ತಾ ಹೋದರೂ ಎಲೆ ತುಂಬುವುದೇ ಇಲ್ಲ. ಆದರೆ ಪಂಚಪಾಂಡವರು ತೃಪ್ತಿಯಿಂದ ಊಟ ಮಾಡುತ್ತಾರೆ.

ಅಷ್ಟೇ ಅಲ್ಲದೆ, ತಮಗೆ ಉಣಬಡಿಸಿದ ರೈತ ದಂಪತಿಗಳಿಗೆ ತಾವು ಯಾವತ್ತೂ ರೈತನ ಹೊಲ ಕಾಯುವ ಕಾರ್ಯವನ್ನು ನಿಷ್ಠೆಯಿಂದ ನಿರ್ವಹಿಸುವುದಾಗಿ ಮಾತು ಕೊಡುತ್ತಾರೆ. ಅದಕ್ಕೆ ರೈತ ದಂಪತಿಗಳು, ಪ್ರತಿವರ್ಷವೂ ಶೀಗಿ ಹುಣ್ಣಿಮೆಯ ಈ ದಿನ ನಿಮ್ಮನ್ನು ನಾವು ಸತ್ಕರಿಸುತ್ತೇವೆ ಎಂದು ಪ್ರತಿಯಾಗಿ ಹೇಳುತ್ತಾರೆ.

ಈ ಕಥೆಯ ಮತ್ತೊಂದು ನಿರೂಪಣೆಯ ಪ್ರಕಾರ, ಅಜ್ಞಾತವಾಸಕ್ಕೂ ಮುನ್ನವೇ ಕರ್ಣನು ತಮ್ಮ ಸಹೋದರನೆಂಬ ಅರಿವಿದ್ದ ಪಾಂಡವರು ಮತ್ತೊಂದು ಬನ್ನಿ ಎಲೆಯಲ್ಲಿ ತಮ್ಮ ಸಹೋದರ ಕರ್ಣನಿಗಾಗಿ ಆಹಾರವನ್ನು ಪಡೆಯುತ್ತಾರೆ ಎಂಬ ನಂಬಿಕೆಯೂ ಇದೆ.

ನಂತರ ನೈವೇದ್ಯ ಮಾಡಿದ ಆಹಾರದ ಒಂದು ಭಾಗವನ್ನು ಭೂಮಿಯಲ್ಲಿ ಗುಳಿ ತೋಡಿ ಅದರಲ್ಲಿ ಸಮರ್ಪಿಸುತ್ತಾರೆ. ಇನ್ನುಳಿದ ನೈವೇದ್ಯದ ಭಾಗವನ್ನು ಚರಗ ಚೆಲ್ಲಲು ತೆಗೆದುಕೊಂಡು ಹೋಗುತ್ತಾರೆ.

ನೈವೇದ್ಯ ಹಿಡಿದ ವ್ಯಕ್ತಿ ಹುಲ್ಲುಲ್ಲಿಗೋ ಎಂದು ಹೇಳುತ್ತಾ ತನ್ನ ಕೈಯಲ್ಲಿರುವ ಎಡೆಯಿಂದ ಸ್ವಲ್ಪಸ್ವಲ್ಪ ಭಾಗವನ್ನು ಹೊಲದ ಸುತ್ತಲೂ ಚೆಲ್ಲುತ್ತಾ ಸಾಗುತ್ತಾನೆ. ಹಿಂದೆ ಸಾಗುವ ಮಕ್ಕಳು ಚಳ್ಳಂಬರಿಗೋ ಎಂದು ಕೂಗುತ್ತಾ ಹೋಗುತ್ತಾರೆ.

ಹುಲ್ಲುಲ್ಲಿಗೋ ಎಂದರೆ ಹೊಲದಲ್ಲಿರುವ ಪ್ರತಿಯೊಂದು ಹುಲ್ಲಿನ ಕಣಕ್ಕೂ, ಚಳ್ಳಂಬರಿಗೋ ಎಂದರೆ ಪ್ರತಿಯೊಂದು ಬೇರಿಗೂ ಈ ಆಹಾರವು ಮುಟ್ಟಲಿ ಎಂಬುದು ರೈತನ ಆಶಯ.

ಜೊತೆಗೆ ಹೊಲದಲ್ಲಿರುವ ಎಲ್ಲ ಕ್ರಿಮಿಕೀಟಗಳಿಗೂ ರೈತ ಚರಗ ಚೆಲ್ಲುವ ಮೂಲಕ ಆಹಾರ ಸಲ್ಲಿಸುತ್ತಾನೆ. ತನ್ಮೂಲಕ ವಸುಧೈವ ಕುಟುಂಬಕಂ ಎಂಬ ಸಂದೇಶವನ್ನು ಜಗತ್ತಿಗೆ ಸಾರುತ್ತಾನೆ.

ಹೀಗೆ ಭೂತಾಯಿಗೆ ಚರಗ ಚೆಲ್ಲಿದ ನಂತರ ರೈತನ ಕುಟುಂಬ ತನ್ನ ಬಂಧುಬಾಂಧವರೊಡಗೂಡಿ ಹಬ್ಬದ ಅಡುಗೆಯನ್ನು ಸವಿಯುತ್ತದೆ.

ರೈತನ ಮನೆಯ ಅಡುಗೆ ಮೃಷ್ಟಾನ್ನಕ್ಕಿಂತಲೂ ಹೆಚ್ಚು. ಸವಿದಷ್ಟು ಸವಿ ಹೆಚ್ಚಾಗುವ, ಮೊಗೆದಷ್ಟೂ ಬಸಿಯುವ ನೀರಿನ ಊಟೆಯಂತೆ!

ತನ್ನಲ್ಲಿರುವ ಎಲ್ಲವನ್ನೂ ಇತರರೊಂದಿಗೆ ಸಂತೋಷದಿಂದ ಹಂಚಿಕೊಂಡು, ಅವರ ಸಂತಸದಲ್ಲಿಯೇ ತನ್ನ ಸಂತಸವನ್ನು ಕಾಣುವ ವಿಶಿಷ್ಟ ಗುಣ ರೈತನದು. ಹೀಗೆ ರೈತ ಸಂತಸ ಪಡಲು ಆತನ ಕೊಡುವ ಗುಣವೇ ಕಾರಣವಾಗಿದೆ.

ಈ ರೀತಿಯಾಗಿ ಶೀಗಿ ಹುಣ್ಣಿಮೆಯನ್ನು ಉತ್ತರ ಕರ್ನಾಟಕದ ಬಯಲುಸೀಮೆಯ ಭಾಗದಲ್ಲಿ ಸಡಗರ-ಸಂಭ್ರಮದಿಂದ ಆಚರಿಸುತ್ತಾರೆ.

ನೀವು ಕೂಡ ಹತ್ತಿರದ ಯಾವುದಾದರೂ ಊರಿನ ಹೊಲಕ್ಕೆ ಹೋದರೆ ಅಲ್ಲಿಯ ರೈತರು ನಿಮ್ಮನ್ನೂ ಕರೆದು ಉಣಬಡಿಸುವುದರಲ್ಲಿ ಸಂದೇಹವೇ ಇಲ್ಲ.

ಈ ರೀತಿ ಭೂತಾಯಿಯನ್ನು ಪೂಜಿಸುವ ರೈತ ಯಾವಾಗಲೂ ನಗುನಗುತ್ತಾ ಇರಲಿ. ಆತನ ಬಾಳು ಹಸನಾಗಲಿ. ರೈತ ಜಗದ ಬೆಳಕಾಗಲಿ ಎಂಬ ಆಶಯದೊಂದಿಗೆ...

**-ವೀಣಾ ಹೇಮಂತಗೌಡ ಪಾಟೀಲ್**
ಮುಂಡರಗಿ, ಗದಗ.

# ನಗರದಲ್ಲಿ ಹದಗೆಟ್ಟ ಕಾನೂನು ಸುವ್ಯವಸ್ಥೆ: ಅಪರಾಧ ಚಟುವಟಿಕೆಗಳಿಗೆ ಕಡಿವಾಣ ಹಾಕಲು ಬಂಗಿ ಮುನಿರೆಡ್ಡಿ ಆಗ್ರಹ



ರಾಯಚೂರು: ನಗರದಲ್ಲಿ ಇತ್ತೀಚಿನ ದಿನಗಳಲ್ಲಿ ಕೊಲೆ, ಮಾದಕ ವಸ್ತುಗಳ ಮಾರಾಟ ಹಾಗೂ ಇತರ ಅಪರಾಧ ಚಟುವಟಿಕೆಗಳು ಹೆಚ್ಚುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ಜಿಲ್ಲಾಡಳಿತ ಹಾಗೂ ಪೊಲೀಸ್ ಇಲಾಖೆ ವಿಫಲವಾಗಿವೆ ಎಂದು ಲೋಕ ಜನಶಕ್ತಿ ಪಕ್ಷದ (ಕೀ.ಸೆ) ಜಿಲ್ಲಾಧ್ಯಕ್ಷ ಬಂಗಿ ಮುನಿರೆಡ್ಡಿ ಆರೋಪಿಸಿದ್ದಾರೆ.

ನಗರದ ಎಲ್.ಬಿ.ಎಸ್. ನಗರದಲ್ಲಿ ಹಾಡಹಗಲೇ ನರಸಿಂಹ ಎಂಬ ಯುವಕನನ್ನು ರಸ್ತೆಯಲ್ಲೇ ಬರ್ಬರವಾಗಿ ಹತ್ಯೆ ಮಾಡಿರುವ ಘಟನೆ ಸಾರ್ವಜನಿಕರಲ್ಲಿ ಭಯದ ವಾತಾವರಣ ಸೃಷ್ಟಿಸಿದೆ. ಈ ಹತ್ಯೆಯ ಹಿಂದೆ ಗಾಂಜಾ ಸೇವನೆ ಹಾಗೂ ಮಾದಕ ವಸ್ತುಗಳ ಪ್ರಭಾವವಿರುವ ಶಂಕೆ ವ್ಯಕ್ತವಾಗಿದ್ದು, ಪೊಲೀಸರು ಪ್ರಕರಣದ ಸಮಗ್ರ ತನಿಖೆ ನಡೆಸಿ ಆರೋಪಿಗಳನ್ನು ಕೂಡಲೇ ಬಂಧಿಸಬೇಕು. ತಪ್ಪಿತಸ್ಥರಿಗೆ ಕಾನೂನಿನಡಿ ಕಠಿಣ ಶಿಕ್ಷೆಯಾಗುವಂತೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

ಇನ್ನೊಂದೆಡೆ, ನಗರದ ಮಂತ್ರಾಲಯ ರಸ್ತೆಯಲ್ಲಿರುವ ಸ್ಮಶಾನದಲ್ಲಿ ಹೂಳಲಾಗಿದ್ದ ಶವಗಳನ್ನು ಹೊರತೆಗೆದು ಖಾಸಗಿ ವೈದ್ಯಕೀಯ ಕಾಲೇಜಿಗೆ ಮಾರಾಟ ಮಾಡಲಾಗುತ್ತಿದೆ ಎಂಬ ಗಂಭೀರ ಆರೋಪ ಬೆಳಕಿಗೆ ಬಂದಿರುವುದು ಆಘಾತಕಾರಿಯಾಗಿದೆ. ಈ ಪ್ರಕರಣದಲ್ಲಿ ಭಾಗಿಯಾಗಿರುವ ವ್ಯಕ್ತಿಗಳು ಹಾಗೂ ಸಂಬಂಧಪಟ್ಟ ವೈದ್ಯಕೀಯ ಕಾಲೇಜಿನ ಸಿಬ್ಬಂದಿಯ ಪಾತ್ರದ ಕುರಿತು ನಿಷ್ಪಕ್ಷಪಾತ ತನಿಖೆ ನಡೆಸಬೇಕು. ತಪ್ಪಿತಸ್ಥರು ಯಾರೇ ಆಗಿದ್ದರೂ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

ನಗರದಲ್ಲಿ ಗಾಂಜಾ ಸೇರಿದಂತೆ ವಿವಿಧ ಮಾದಕ ವಸ್ತುಗಳ ಅಕ್ರಮ ಮಾರಾಟ ಹೆಚ್ಚಾಗುತ್ತಿದೆ. ಇದರೊಂದಿಗೆ ಮನೆಗಳು, ರಸ್ತೆಬದಿಗಳು ಹಾಗೂ ವಿವಿಧ ಪ್ರದೇಶಗಳಲ್ಲಿ ಅಕ್ರಮ ಮತ್ತು ನಕಲಿ ಮದ್ಯ ಮಾರಾಟ ನಡೆಯುತ್ತಿದೆ ಎಂಬ ದೂರುಗಳು ಕೇಳಿಬರುತ್ತಿವೆ. ಇಂತಹ ಚಟುವಟಿಕೆಗಳು ನಡೆಯುತ್ತಿದ್ದರೂ ಸಂಬಂಧಪಟ್ಟ ಅಧಿಕಾರಿಗಳು ನಿರ್ಲಕ್ಷ್ಯ ವಹಿಸುತ್ತಿರುವುದು ಖಂಡನೀಯ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಮಾದಕ ವಸ್ತುಗಳ ವ್ಯಸನಕ್ಕೆ ಒಳಗಾಗುತ್ತಿರುವ ಯುವಕರು ತಮ್ಮ ಭವಿಷ್ಯ ಹಾಳುಮಾಡಿಕೊಳ್ಳುವುದಲ್ಲದೆ, ಸಣ್ಣಪುಟ್ಟ ವಿಚಾರಗಳಿಗೂ ಜಗಳವಾಡಿ ಹಿಂಸಾತ್ಮಕ ಕೃತ್ಯಗಳಲ್ಲಿ ಭಾಗಿಯಾಗುತ್ತಿರುವುದು ಆತಂಕ ಮೂಡಿಸಿದೆ. ಇಂತಹ ಪರಿಸ್ಥಿತಿಯನ್ನು ನಿಯಂತ್ರಿಸಲು ಪೊಲೀಸ್ ಇಲಾಖೆ ವಿಶೇಷ ಕಾರ್ಯಾಚರಣೆ ನಡೆಸಿ ಮಾದಕ ವಸ್ತುಗಳ ಮಾರಾಟ ಜಾಲವನ್ನು ಬೇರುಸಹಿತ ನಿರ್ಮೂಲನೆ ಮಾಡಬೇಕು ಎಂದು ಒತ್ತಾಯಿಸಿದ್ದಾರೆ.

ಜಿಲ್ಲಾಡಳಿತ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ನಗರದಲ್ಲಿ ಹೆಚ್ಚುತ್ತಿರುವ ಅಪರಾಧ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಬೇಕು. ಗಾಂಜಾ, ಮಾದಕ ವಸ್ತುಗಳು ಹಾಗೂ ಅಕ್ರಮ ಮದ್ಯ ಮಾರಾಟಕ್ಕೆ ಕಡಿವಾಣ ಹಾಕುವುದರ ಜೊತೆಗೆ ಪ್ರಮುಖ ಪ್ರದೇಶಗಳಲ್ಲಿ ಪೊಲೀಸ್ ಗಸ್ತು ಹೆಚ್ಚಿಸಬೇಕು. ಸಾರ್ವಜನಿಕರಲ್ಲಿ ಸುರಕ್ಷತೆಯ ಭಾವನೆ ಮೂಡಿಸುವ ನಿಟ್ಟಿನಲ್ಲಿ ತಕ್ಷಣ ಪರಿಣಾಮಕಾರಿ ಕ್ರಮ ಕೈಗೊಳ್ಳಬೇಕು ಎಂದು ಲೋಕ ಜನಶಕ್ತಿ ಪಕ್ಷದ (ಕೀ.ಸೆ) ಜಿಲ್ಲಾಧ್ಯಕ್ಷ ಬಂಗಿ ಮುನಿರೆಡ್ಡಿ ಆಗ್ರಹಿಸಿದ್ದಾರೆ.

# ಅ.27ರಂದು ನಾರಾಯಣಪುರದಲ್ಲಿ ರೈತ ಸಂಘದ ಪ್ರತಿಭಟನೆ



ನಾಗರಹಾಳ: ಕೃಷಿ ಚಟುವಟಿಕೆಗಳಿಗೆ ಅನುಕೂಲವಾಗುವಂತೆ ಜನವರಿ 30ರವರೆಗೆ ಕಾಲುವೆಗಳಲ್ಲಿ ನೀರು ಹರಿಸುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಲಿಂಗಸುಗೂರು ತಾಲೂಕು ಘಟಕದ ವತಿಯಿಂದ ಅಕ್ಟೋಬರ್ 27ರಂದು ನಾರಾಯಣಪುರದ ಮುಖ್ಯ ಎಂಜಿನಿಯರ್ ಕಚೇರಿ ಎದುರು ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ.

ಈ ಕುರಿತು ಮಾಹಿತಿ ನೀಡಿರುವ ಸಂಘದ ತಾಲೂಕು ಅಧ್ಯಕ್ಷ ಸಂಗನಗೌಡ ಹೊಸೂರು ಹಾಗೂ ತಾಲೂಕು ಕಾರ್ಯದರ್ಶಿ ಖಾಜಾವಲಿ ಜಾಗೀರನಂದಿಹಾಳ, ರೈತರು ಬೆಳೆದಿರುವ ಬೆಳೆಗಳ ರಕ್ಷಣೆಗೆ ನಿರಂತರ ನೀರಿನ ಪೂರೈಕೆ ಅಗತ್ಯವಾಗಿದ್ದು, ಜನವರಿ 30ರವರೆಗೆ ಕಾಲುವೆಗಳಿಗೆ ನೀರು ಹರಿಸಲು ಸಂಬಂಧಪಟ್ಟ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

ರೈತರ ಕೃಷಿ ಚಟುವಟಿಕೆಗಳಿಗೆ ಅಗತ್ಯವಿರುವ ನೀರಿನ ವ್ಯವಸ್ಥೆ ಕಲ್ಪಿಸುವಂತೆ ಒತ್ತಾಯಿಸಿ ಪ್ರತಿಭಟನೆ ನಡೆಸಲಾಗುತ್ತಿದ್ದು, ಬೇಡಿಕೆ ಈಡೇರುವವರೆಗೂ ನಿರಂತರ ಹೋರಾಟ ಮುಂದುವರಿಸಲಾಗುವುದು ಎಂದು ತಿಳಿಸಿದ್ದಾರೆ.

ಅಕ್ಟೋಬರ್ 27ರಂದು ನಾರಾಯಣಪುರದ ಮುಖ್ಯ ಎಂಜಿನಿಯರ್ ಕಚೇರಿ ಎದುರು ನಡೆಯಲಿರುವ ಪ್ರತಿಭಟನೆಯಲ್ಲಿ ಲಿಂಗಸುಗೂರು ತಾಲೂಕಿನ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಹೋರಾಟಕ್ಕೆ ಬೆಂಬಲ ನೀಡಬೇಕು ಎಂದು ಸಂಗನಗೌಡ ಹೊಸೂರು ಹಾಗೂ ಖಾಜಾವಲಿ ಜಾಗೀರನಂದಿಹಾಳ ಮನವಿ ಮಾಡಿದ್ದಾರೆ.

ಸಂಪರ್ಕಿಸಿ
ನಿಮ ವಿಶ್ವಾಸ ಅರ್ಹ ಪತ್ರಿಕೆಯ
ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
98863 85685 tungabimba@gmail.com

# ವಿ ಜಿ ಕೆ ಹೃದ್ರೋಗ ಆಸ್ಪತ್ರೆಗೆ ವಾಲ್ಮೀಕಿ ಗುರುಪೀಠದ ಶ್ರೀ ಪ್ರಸನ್ನಾನಂದಪುರಿ ಸ್ವಾಮೀಜಿ ಭೇಟಿ



ರಾಯಚೂರು: ನಗರದ ವಿಜಿ ಕೆ ಹೃದ್ರೋಗ ಆಸ್ಪತ್ರೆಗೆ ಶ್ರೀ ಮಹರ್ಷಿ ವಾಲ್ಮೀಕಿ ಗುರುಪೀಠದ ರಾಜನಹಳ್ಳಿ ಪೀಠಾಧ್ಯಕ್ಷ ಜಗದ್ಗುರು ಡಾ. ಪ್ರಸನ್ನಾನಂದಪುರಿ ಮಹಾಸ್ವಾಮೀಜಿ ಭೇಟಿ ನೀಡಿ, ಆಸ್ಪತ್ರೆಯ ವೈದ್ಯರ ಸೇವೆಯನ್ನು ಶ್ಲಾಘಿಸಿ ಸನ್ಮಾನಿಸಿದರು.

ಆಸ್ಪತ್ರೆಗೆ ಆಗಮಿಸಿದ ಶ್ರೀಗಳು ಪ್ರಸೂತಿ ಮತ್ತು ಸ್ತ್ರೀರೋಗ ತಜ್ಞ ಡಾ. ವಿ.ಜಿ. ಕುಲಕರ್ಣಿ ಹಾಗೂ ಹೃದ್ರೋಗ ತಜ್ಞ ಡಾ. ಅಜಿತ್ ಕುಲಕರ್ಣಿ ಅವರನ್ನು ಸನ್ಮಾನಿಸಿ ಆಶೀರ್ವದಿಸಿದರು. ಈ ಸಂದರ್ಭದಲ್ಲಿ ಆಸ್ಪತ್ರೆಯಲ್ಲಿ ಲಭ್ಯವಿರುವ ಹೃದ್ರೋಗ ಚಿಕಿತ್ಸಾ ಸೌಲಭ್ಯಗಳು ಹಾಗೂ ವೈದ್ಯಕೀಯ ಸೇವೆಗಳ ಕುರಿತು ಮಾಹಿತಿ ಪಡೆದರು.

ಬಳಿಕ ಮಾತನಾಡಿದ ಶ್ರೀಗಳು, ಕಳೆದ ಮಾರ್ಚ್ ತಿಂಗಳಲ್ಲಿ ತಮಗೆ ಹೃದಯ ಸಂಬಂಧಿ ಆರೋಗ್ಯ ಸಮಸ್ಯೆ ಕಾಣಿಸಿಕೊಂಡ ಸಂದರ್ಭದಲ್ಲಿ ಡಾ. ಅಜಿತ್ ಕುಲಕರ್ಣಿ ಅವರು ಸೂಕ್ತ ಚಿಕಿತ್ಸೆ ನೀಡಿದ್ದನ್ನು ಸ್ಮರಿಸಿದರು. ಅಂದು ವೈದ್ಯರು ತೋರಿದ ಕಾಳಜಿ ಹಾಗೂ ನೀಡಿದ ವೈದ್ಯಕೀಯ ಸೇವೆಗೆ ಕೃತಜ್ಞತೆ ವ್ಯಕ್ತಪಡಿಸಿದರು.

ಕಲ್ಯಾಣ ಕರ್ನಾಟಕ ಭಾಗದಲ್ಲಿ ಹೃದ್ರೋಗ ಚಿಕಿತ್ಸೆಗೆ ಅಗತ್ಯವಿರುವ ಸುಸಜ್ಜಿತ ಆಸ್ಪತ್ರೆಗಳು ಹಾಗೂ ಅನುಭವಿ ತಜ್ಞ ವೈದ್ಯರ ಸೇವೆ ದೊರೆಯುತ್ತಿರುವುದು ಈ ಭಾಗದ ಜನತೆಗೆ ಅನುಕೂಲಕರವಾಗಿದೆ. ವಿಶೇಷವಾಗಿ ರಾಯಚೂರಿನಂತಹ ನಗರದಲ್ಲಿ ಹೃದಯ ಸಂಬಂಧಿ ಕಾಯಿಲೆಗಳಿಗೆ ಚಿಕಿತ್ಸೆ ನೀಡುವ ವೈದ್ಯಕೀಯ ಸೌಲಭ್ಯಗಳು ಲಭ್ಯವಿರುವುದು ಸಂತಸದ ಸಂಗತಿಯಾಗಿದೆ ಎಂದು ಹೇಳಿದರು.

ಈ ಹಿಂದೆ ಆಸ್ಪತ್ರೆಗೆ ಭೇಟಿ ನೀಡಿದ ಸಂದರ್ಭದಲ್ಲಿ ಹೃದ್ರೋಗ ತಜ್ಞರಾದ ಡಾ. ಸಗರದ, ಡಾ. ಬಸನಗೌಡ ಪಾಟೀಲ್, ಡಾ. ಬಿ.ಎಂ. ಪಾಟೀಲ್ ಸೇರಿದಂತೆ ಹಲವು ವೈದ್ಯರು ತಮಗೆ ಚಿಕಿತ್ಸೆ ನೀಡಿದ್ದನ್ನು ನೆನಪಿಸಿಕೊಂಡ ಶ್ರೀಗಳು, ವೈದ್ಯರ ಸೇವಾಭಾವ ಹಾಗೂ ರೋಗಿಗಳ ಆರೋಗ್ಯದ ಬಗ್ಗೆ ತೋರುವ ಕಾಳಜಿಯನ್ನು ಮೆಚ್ಚಿದರು.

ವೈದ್ಯಕೀಯ ವೃತ್ತಿಯು ಅತ್ಯಂತ ಜವಾಬ್ದಾರಿಯುತ ಸೇವೆಯಾಗಿದ್ದು, ರೋಗಿಗಳ ಆರೋಗ್ಯ ಕಾಪಾಡುವಲ್ಲಿ ವೈದ್ಯರ ಪಾತ್ರ ಮಹತ್ವದ್ದಾಗಿದೆ. ಉತ್ತಮ ಚಿಕಿತ್ಸೆಯ ಜೊತೆಗೆ ರೋಗಿಗಳಿಗೆ ಧೈರ್ಯ ಮತ್ತು ಆತ್ಮವಿಶ್ವಾಸ ತುಂಬುವುದು ಕೂಡ ವೈದ್ಯಕೀಯ ಸೇವೆಯ ಪ್ರಮುಖ ಭಾಗವಾಗಿದೆ ಎಂದು ಅಭಿಪ್ರಾಯಪಟ್ಟರು.

ವಿಜಿ ಕೆ ಹೃದ್ರೋಗ ಆಸ್ಪತ್ರೆಯ ಮೂಲಕ ಕಲ್ಯಾಣ ಕರ್ನಾಟಕ ಭಾಗದ ಜನತೆಗೆ ಇನ್ನಷ್ಟು ಉತ್ತಮ ವೈದ್ಯಕೀಯ ಸೇವೆಗಳು ದೊರೆಯಲಿ. ಆಸ್ಪತ್ರೆಯ ವೈದ್ಯರು ಹಾಗೂ ಸಿಬ್ಬಂದಿ ಹೆಚ್ಚಿನ ಜನರಿಗೆ ಆರೋಗ್ಯ ಸೇವೆ ಒದಗಿಸುವಂತಾಗಲಿ ಎಂದು ಹಾರೈಸಿದ ಶ್ರೀಗಳು, ಎಲ್ಲರ ಮೇಲೂ ಶ್ರೀ ಮಹರ್ಷಿ ವಾಲ್ಮೀಕಿ ಗುರುಗಳ ಆಶೀರ್ವಾದ ಇರಲಿ ಎಂದು ಶುಭ ಕೋರಿದರು.

ಈ ಸಂದರ್ಭದಲ್ಲಿ ಡಾ. ಶಾರದಾ ಹುಲಿನಾಯಕ, ಪ್ರಸೂತಿ ಮತ್ತು ಸ್ತ್ರೀರೋಗ ತಜ್ಞ ಡಾ. ಪ್ರಭು ಹುಲಿನಾಯಕ, ಲ್ಯಾಪರೊಸ್ಕೋಪಿಕ್ ಶಸ್ತ್ರಚಿಕಿತ್ಸಕ ಡಾ. ಅಮೃತ್ ನಾಯಕ, ಪ್ರಸೂತಿ ಮತ್ತು ಸ್ತ್ರೀರೋಗ ತಜ್ಞೆ ಡಾ. ಪ್ರಿಯದರ್ಶಿನಿ ನಾಯಕ ಹಾಗೂ ನಿವೃತ್ತ ತಹಶೀಲ್ದಾರ್ ಲಕ್ಷ್ಮಯ್ಯ ಉಪಸ್ಥಿತರಿದ್ದರು.

# ಮಹಿಳೆಯರು ಕಾನೂನು ಅರಿವು ಪಡೆದು ಸ್ವಾವಲಂಬಿ ಬದುಕು ರೂಪಿಸಿಕೊಳ್ಳಬೇಕು: ನ್ಯಾಯಾಧೀಶೆ ಮಂಜುಳಾ ಶಿವಪ್ಪ



ಹಟ್ಟಿ ಚಿನ್ನದ ಗಣಿ: ಮಹಿಳೆಯರು ತಮ್ಮ ಹಕ್ಕುಗಳು ಹಾಗೂ ಕಾನೂನು ಸೌಲಭ್ಯಗಳ ಬಗ್ಗೆ ಅರಿವು ಹೊಂದುವ ಮೂಲಕ ಸಾಮಾಜಿಕವಾಗಿ ಮತ್ತು ಆರ್ಥಿಕವಾಗಿ ಸಬಲರಾಗಬೇಕು ಎಂದು ನ್ಯಾಯಾಧೀಶೆ ಹುಂಡಿ ಮಂಜುಳಾ ಶಿವಪ್ಪ ಹೇಳಿದರು.

ಪಟ್ಟಣದ ಶ್ರೀ ಲಿಂಗಾವಧೂತ ದೇವಸ್ಥಾನದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ. ಟ್ರಸ್ಟ್ (ರಿ.) ವತಿಯಿಂದ ಆಯೋಜಿಸಿದ್ದ ತಾಲೂಕು ಮಟ್ಟದ ಮಹಿಳಾ ವಿಚಾರಗೋಷ್ಠಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮಹಿಳೆಯರು ತಮ್ಮ ಹಕ್ಕುಗಳ ರಕ್ಷಣೆಗಾಗಿ ಕಾನೂನಿನ ಬಗ್ಗೆ ತಿಳಿದುಕೊಳ್ಳುವುದು ಅತ್ಯಂತ ಅಗತ್ಯವಾಗಿದೆ. ಮಹಿಳೆಯರ ಸುರಕ್ಷತೆ, ಸಮಾನತೆ ಹಾಗೂ ನ್ಯಾಯಕ್ಕಾಗಿ ಹಲವು ಕಾನೂನು ಸೌಲಭ್ಯಗಳು ಲಭ್ಯವಿದ್ದು, ಅವುಗಳ ಸದುಪಯೋಗ ಪಡೆದುಕೊಳ್ಳಬೇಕು. ಅಗತ್ಯ ಸಂದರ್ಭಗಳಲ್ಲಿ ಕಾನೂನು ನೆರವು ಪಡೆಯಲು ಹಿಂದೇಟು ಹಾಕಬಾರದು ಎಂದು ಸಲಹೆ ನೀಡಿದರು.

ಕಾರ್ಯಕ್ರಮವನ್ನು ನ್ಯಾಯಾಧೀಶೆ ಹುಂಡಿ ಮಂಜುಳಾ ಶಿವಪ್ಪ, ಪ್ರಧಾನ ಸಿವಿಲ್ ನ್ಯಾಯಾಧೀಶ ಅಂಬಣ್ಣ ಕೆ., ಜಿಲ್ಲಾ ನಿರ್ದೇಶಕ ರಾಘವೇಂದ್ರ ಪಟಗಾರ, ವಕೀಲರ ಸಂಘದ ಅಧ್ಯಕ್ಷ ಭೂಪನಗೌಡ, ಪಟ್ಟಣ ಪಂಚಾಯಿತಿ ಉಪಾಧ್ಯಕ್ಷೆ ನಾಗರತ್ನ, ಬಲಭೀಮರಾವ್ ಕುಲಕರ್ಣಿ ಹಾಗೂ ಯೋಜನಾಧಿಕಾರಿ ಅಡಿವಯ್ಯ ಅವರು ಜಂಟಿಯಾಗಿ ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಜಿಲ್ಲಾ ನಿರ್ದೇಶಕ ರಾಘವೇಂದ್ರ ಪಟಗಾರ, ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಸ್ಥಾಪನೆ, ಧ್ಯೇಯೋದ್ದೇಶಗಳು ಹಾಗೂ ಗ್ರಾಮೀಣ ಜನರ ಆರ್ಥಿಕ ಮತ್ತು ಸಾಮಾಜಿಕ ಅಭಿವೃದ್ಧಿಗೆ ಕೈಗೊಂಡಿರುವ ಕಾರ್ಯಕ್ರಮಗಳ ಕುರಿತು ವಿವರಿಸಿದರು. ಮಹಿಳೆಯರನ್ನು ಸಂಘಟಿಸಿ ಸ್ವಾವಲಂಬಿ ಜೀವನಕ್ಕೆ ಪ್ರೋತ್ಸಾಹಿಸುವಲ್ಲಿ ಸ್ವಸಹಾಯ ಸಂಘಗಳು ಪ್ರಮುಖ ಪಾತ್ರ ವಹಿಸುತ್ತಿವೆ. ಜ್ಞಾನವಿಕಾಸ ಕಾರ್ಯಕ್ರಮಗಳ ಮೂಲಕ ಮಹಿಳೆಯರಲ್ಲಿ ಶಿಕ್ಷಣ, ಆರೋಗ್ಯ, ಆರ್ಥಿಕ ನಿರ್ವಹಣೆ ಹಾಗೂ ಸಾಮಾಜಿಕ ಜಾಗೃತಿ ಮೂಡಿಸಲಾಗುತ್ತಿದೆ ಎಂದು ತಿಳಿಸಿದರು.

ಸಂಪನ್ಮೂಲ ವ್ಯಕ್ತಿ ಪೆಂಚಲಮ್ಮ ಮಾತನಾಡಿ, ಕುಟುಂಬದ ನಿರ್ವಹಣೆಯಲ್ಲಿ ಮಹಿಳೆಯರ ಜವಾಬ್ದಾರಿ, ಮಕ್ಕಳ ಪಾಲನೆ, ಕುಟುಂಬ ಸದಸ್ಯರ ನಡುವಿನ ಬಾಂಧವ್ಯ ಹಾಗೂ ಸಂಬಂಧಗಳಲ್ಲಿ ಸಮತೋಲನ ಕಾಪಾಡಿಕೊಳ್ಳುವ ಮಹತ್ವದ ಕುರಿತು ಉದಾಹರಣೆಗಳೊಂದಿಗೆ ಮಾಹಿತಿ ನೀಡಿದರು.

ಪೊಲೀಸ್ ಇನ್‌ಸ್ಪೆಕ್ಟರ್ ಹನುಮಂತನಾಯಕ್ ಮಾತನಾಡಿ, ಮಹಿಳೆಯರು ಮತ್ತು ಹೆಣ್ಣುಮಕ್ಕಳ ಮೇಲೆ ನಡೆಯುವ ದೌರ್ಜನ್ಯಗಳು, ಅವುಗಳನ್ನು ತಡೆಗಟ್ಟಲು ಇರುವ ಕಾನೂನು ಕ್ರಮಗಳು ಹಾಗೂ ಸಂಕಷ್ಟದ ಸಂದರ್ಭಗಳಲ್ಲಿ ಪೊಲೀಸ್ ಇಲಾಖೆಯಿಂದ ಪಡೆಯಬಹುದಾದ ನೆರವಿನ ಕುರಿತು ಜಾಗೃತಿ ಮೂಡಿಸಿದರು.

ಇದೇ ಸಂದರ್ಭದಲ್ಲಿ ಯೋಜನೆಯ ಜನಮಂಗಳ ಕಾರ್ಯಕ್ರಮದಡಿ ಅರ್ಹ ಫಲಾನುಭವಿಗಳಿಗೆ ವೀಲ್ ಚೇರ್ ವಿತರಿಸಲಾಯಿತು. ಸುಜ್ಞಾನ ಶಿಷ್ಯವೇತನ ಯೋಜನೆಯಡಿ ಆಯ್ಕೆಯಾದ ಮೂವರು ವಿದ್ಯಾರ್ಥಿಗಳಿಗೆ ಮಂಜೂರಾತಿ ಪತ್ರಗಳನ್ನು ನೀಡಲಾಯಿತು. ಸ್ವಸಹಾಯ ಸಂಘಗಳ ಸದಸ್ಯರಿಗೆ ಲಾಭಾಂಶ ಹಾಗೂ ಆರೋಗ್ಯ ರಕ್ಷಾ ಯೋಜನೆಯ ಚೆಕ್‌ಗಳನ್ನು ವಿತರಿಸಲಾಯಿತು.

ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ್ದರೂ ಹೆಚ್ಚಿನ ಪ್ರಚಾರಕ್ಕೆ ಬಾರದ ಮಹಿಳೆಯರನ್ನು ಗುರುತಿಸಿ ಸನ್ಮಾನಿಸುವ ಮೂಲಕ ಅವರ ಸೇವೆ ಮತ್ತು ಸಾಧನೆಗೆ ಗೌರವ ಸಲ್ಲಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕರಡಕಲ್ ಪಟ್ಟಣ ಪಂಚಾಯಿತಿ ಉಪಾಧ್ಯಕ್ಷೆ ನಾಗರತ್ನ ಮಾತನಾಡಿ, ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಸದಸ್ಯೆಯಾಗಿ ತಾವು ಪಡೆದ ಅನುಭವಗಳನ್ನು ಹಂಚಿಕೊಂಡರು. ಯೋಜನೆಯಿಂದ ಮಹಿಳೆಯರಿಗೆ ದೊರೆಯುತ್ತಿರುವ ಪ್ರೋತ್ಸಾಹ ಹಾಗೂ ಸೌಲಭ್ಯಗಳ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ಕಾರ್ಯಕ್ರಮದ ಅಂಗವಾಗಿ ಮಹಿಳೆಯರು ಹಾಗೂ ವಿದ್ಯಾರ್ಥಿಗಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು. ನೃತ್ಯ ಪ್ರದರ್ಶನಗಳು ನೆರೆದಿದ್ದವರ ಗಮನ ಸೆಳೆದವು. ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಬಹುಮಾನಗಳನ್ನು ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಯೋಜನೆಯ ಪದಾಧಿಕಾರಿಗಳು, ಸ್ವಸಹಾಯ ಸಂಘಗಳ ಸದಸ್ಯೆಯರು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

# ಬಾದರ್ಲಿ ಜಿ.ಪಂ. ಕ್ಷೇತ್ರದ ಕಾಂಗ್ರೆಸ್ ಟಿಕೆಟ್‌ಗೆ ಅರುಣಕುಮಾರ ನಾಯಕ ಪರ ಬೆಂಬಲಿಗರ ಒತ್ತಾಯ



ಸಿಂಧನೂರು: ಮುಂಬರುವ ಜಿಲ್ಲಾ ಪಂಚಾಯಿತಿ ಚುನಾವಣೆಯಲ್ಲಿ ಪರಿಶಿಷ್ಟ ಪಂಗಡಕ್ಕೆ ಮೀಸಲಾಗಿರುವ ಬಾದರ್ಲಿ ಕ್ಷೇತ್ರದಿಂದ ಕಾಂಗ್ರೆಸ್ ಅಭ್ಯರ್ಥಿಯಾಗಿ ಯುವ ಮುಖಂಡ ಅರುಣಕುಮಾರ ನಾಯಕ ಯಾಪಲಪರ್ವಿ ಅವರಿಗೆ ಟಿಕೆಟ್ ನೀಡಬೇಕು ಎಂದು ಕಾಂಗ್ರೆಸ್ ಯುವ ಮುಖಂಡ ಜಿ. ಮಾರೇಶ ನಾಯಕ ಒತ್ತಾಯಿಸಿದ್ದಾರೆ.

ರೈತ ಕುಟುಂಬದ ಹಿನ್ನೆಲೆಯಿಂದ ಬಂದಿರುವ ಅರುಣಕುಮಾರ ನಾಯಕ ಅವರು ಸಾಮಾಜಿಕ ಸೇವೆ, ಯುವಜನರ ಸಂಘಟನೆ ಹಾಗೂ ಪಕ್ಷದ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದಾರೆ. ಸಿಂಧನೂರು ತಾಲೂಕು ವಾಲ್ಮೀಕಿ ಸಮಾಜದ ಅಧ್ಯಕ್ಷರಾಗಿದ್ದ ಸಂದರ್ಭದಲ್ಲಿ ವಾಲ್ಮೀಕಿ ವೃತ್ತ ನಿರ್ಮಾಣ, ವಾಲ್ಮೀಕಿ ಭವನಕ್ಕೆ ನಿವೇಶನ ಹಾಗೂ ವಿದ್ಯಾರ್ಥಿನಿಲಯಕ್ಕೆ ಸಂಬಂಧಿಸಿದ ಕಾರ್ಯಗಳಲ್ಲಿ ಶ್ರಮಿಸಿದ್ದಾರೆ ಎಂದು ತಿಳಿಸಿದ್ದಾರೆ.

ಸಮಾಜದ ಹಕ್ಕುಗಳ ರಕ್ಷಣೆಗಾಗಿ ಹೋರಾಟ ನಡೆಸಿರುವ ಅವರು, ಸಂಕಷ್ಟದಲ್ಲಿರುವ ಕುಟುಂಬಗಳಿಗೆ ನೆರವು, ಯುವಕರಿಗೆ ಉದ್ಯೋಗಾವಕಾಶ ಕಲ್ಪಿಸುವ ಪ್ರಯತ್ನ, ಕ್ರೀಡಾ ಚಟುವಟಿಕೆಗಳಿಗೆ ಪ್ರೋತ್ಸಾಹ ಹಾಗೂ ಕೊರೊನಾ ಲಾಕ್‌ಡೌನ್ ಸಂದರ್ಭದಲ್ಲಿ ಆಹಾರ ವಿತರಣೆ ಸೇರಿದಂತೆ ವಿವಿಧ ಸಮಾಜಮುಖಿ ಕಾರ್ಯಗಳಲ್ಲಿ ಭಾಗವಹಿಸಿದ್ದಾರೆ ಎಂದು ಹೇಳಿದ್ದಾರೆ.

ಕ್ಷೇತ್ರದಲ್ಲಿ ಹಿರಿಯರು ಹಾಗೂ ಯುವಜನರೊಂದಿಗೆ ಉತ್ತಮ ಸಂಪರ್ಕ ಹೊಂದಿರುವ ಅರುಣಕುಮಾರ ನಾಯಕ ಅವರಿಗೆ ಸ್ಪರ್ಧಿಸಲು ಅವಕಾಶ ನೀಡುವಂತೆ ಬೆಂಬಲಿಗರಿಂದ ಒತ್ತಾಯ ಕೇಳಿಬರುತ್ತಿದೆ. ಪಕ್ಷದ ಸಂಘಟನೆಗೆ ನಿರಂತರವಾಗಿ ಶ್ರಮಿಸುವವರಿಗೆ ಆದ್ಯತೆ ನೀಡಬೇಕು ಎಂದು ಮಾರೇಶ ನಾಯಕ ಅಭಿಪ್ರಾಯಪಟ್ಟಿದ್ದಾರೆ.

ಶಾಸಕ ಹಂಪನಗೌಡ ಬಾದರ್ಲಿ ಹಾಗೂ ಕಾಂಗ್ರೆಸ್ ಮುಖಂಡರಾದ ಪಂಪನಗೌಡ ಬಾದರ್ಲಿ, ಬಾಬುಗೌಡ ಬಾದರ್ಲಿ ಸೇರಿದಂತೆ ಪಕ್ಷದ ಹಿರಿಯ ನಾಯಕರು ಅರುಣಕುಮಾರ ನಾಯಕ ಅವರ ಸಮಾಜಸೇವೆ ಮತ್ತು ಸಂಘಟನಾ ಚಟುವಟಿಕೆಗಳನ್ನು ಪರಿಗಣಿಸಿ ಟಿಕೆಟ್ ನೀಡಬೇಕು ಎಂದು ಮನವಿ ಮಾಡಿದ್ದಾರೆ.

ಬಾದರ್ಲಿ ಜಿಲ್ಲಾ ಪಂಚಾಯಿತಿ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆಯ್ಕೆ ಕುರಿತು ಪಕ್ಷದ ಅಧಿಕೃತ ನಿರ್ಧಾರ ಇನ್ನೂ ಪ್ರಕಟವಾಗಿಲ್ಲ.

# ಮಲ್ಲಿಕಾರ್ಜುನ ಬಡಾವಣೆಯಲ್ಲಿ ಎಂಟು ದಿನಗಳ ಉಚಿತ ಯೋಗ ಮತ್ತು ಪ್ರಾಣಾಯಾಮ ಶಿಬಿರ




ರಾಯಚೂರು: ನಗರದ ಆಶಾಪುರ ರಸ್ತೆಯ ಹೊರವಲಯದಲ್ಲಿರುವ ಮಲ್ಲಿಕಾರ್ಜುನ ಬಡಾವಣೆಯ ಶ್ರೀ ಏಳು ಮಕ್ಕಳ ತಾಯಾಂಬಿಕಾ ದೇವಸ್ಥಾನದ ಆವರಣದಲ್ಲಿ ಮಲ್ಲಿಕಾರ್ಜುನ ಬಡಾವಣೆ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘ ಹಾಗೂ ಪತಂಜಲಿ ಯೋಗ ಸಮಿತಿ ಸಂಯುಕ್ತಾಶ್ರಯದಲ್ಲಿ ಎಂಟು ದಿನಗಳ ಉಚಿತ ಯೋಗ ಮತ್ತು ಪ್ರಾಣಾಯಾಮ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ.

ದೇವಸ್ಥಾನ ಹಾಗೂ ಬಡಾವಣೆ ಸಂಘದ ಅಧ್ಯಕ್ಷ ಮರೇಗೌಡ ಪಾಟೀಲ ಅವರ ನೇತೃತ್ವದಲ್ಲಿ ಆಯೋಜಿಸಿರುವ ಶಿಬಿರದಲ್ಲಿ ಬಡಾವಣೆಯ ನಿವಾಸಿಗಳು ಹಾಗೂ ಸಾರ್ವಜನಿಕರು ಉತ್ಸಾಹದಿಂದ ಭಾಗವಹಿಸಿದರು.

ಪತಂಜಲಿ ಯೋಗ ಸಮಿತಿಯ ನಗರ ಸಂಚಾಲಕ ಹಾಗೂ ಯೋಗಗುರು ಪರಮೇಶ್ವರ ಸಾಲಿಮಠ ಅವರು ಶಿಬಿರಾರ್ಥಿಗಳಿಗೆ ಶುಭೋದಯ ಕೋರುವ ಮೂಲಕ ಯೋಗಾಭ್ಯಾಸಕ್ಕೆ ಚಾಲನೆ ನೀಡಿದರು. ಬೆಳಿಗ್ಗೆ 5.30ರಿಂದ 7.30ರವರೆಗೆ ನಡೆದ ಶಿಬಿರದಲ್ಲಿ ವಿವಿಧ ಯೋಗಾಸನಗಳು ಹಾಗೂ ಪ್ರಾಣಾಯಾಮದ ಅಭ್ಯಾಸ ಮಾಡಿಸಲಾಯಿತು.

ಯೋಗಗುರು ಪರಮೇಶ್ವರ ಸಾಲಿಮಠ ಅವರು ತಮ್ಮ ಹಾಸ್ಯಮಿಶ್ರಿತ ಮಾತುಗಳ ಮೂಲಕ ಶಿಬಿರಾರ್ಥಿಗಳಲ್ಲಿ ಉತ್ಸಾಹ ಮೂಡಿಸಿದರು. ಯೋಗಾಭ್ಯಾಸದ ನಡುವೆ ಹಾಸ್ಯಭರಿತ ನುಡಿಗಳ ಮೂಲಕ ಎಲ್ಲರನ್ನೂ ನಗಿಸುತ್ತಾ, ಆಸಕ್ತಿಯಿಂದ ಅಭ್ಯಾಸದಲ್ಲಿ ತೊಡಗಿಸಿಕೊಳ್ಳುವಂತೆ ಪ್ರೇರೇಪಿಸಿದರು.

ಶಿಬಿರದಲ್ಲಿ ಸೂರ್ಯ ನಮಸ್ಕಾರ, ವಜ್ರಾಸನ, ಮಂಡೂಕಾಸನ, ತ್ರಿಬಂಧಾಸನ, ಪ್ರಾಣಾಯಾಮ, ಕಠಿನಾಸನ, ಚಪ್ಪಾಳೆ ತಟ್ಟುವುದು, ಸಿಂಹಗರ್ಜನೆ ಹಾಗೂ ಹಾಸ್ಯಾಸನ ಸೇರಿದಂತೆ ವಿವಿಧ ಆಸನಗಳನ್ನು ಸ್ವತಃ ಪ್ರದರ್ಶಿಸಿ ಶಿಬಿರಾರ್ಥಿಗಳಿಗೆ ಅಭ್ಯಾಸ ಮಾಡಿಸಿದರು.

ಬಳಿಕ ಮಾತನಾಡಿದ ಯೋಗಗುರು ಪರಮೇಶ್ವರ ಸಾಲಿಮಠ, ಪ್ರತಿದಿನ ಯೋಗಾಭ್ಯಾಸ ಮಾಡುವುದರಿಂದ ಮನುಷ್ಯನ ದೈಹಿಕ ಮತ್ತು ಮಾನಸಿಕ ಆರೋಗ್ಯ ಸುಧಾರಿಸುವುದರ ಜೊತೆಗೆ ದೈನಂದಿನ ಕಾರ್ಯಚಟುವಟಿಕೆಗಳಲ್ಲಿ ಚೈತನ್ಯದಿಂದ ತೊಡಗಿಸಿಕೊಳ್ಳಲು ಸಹಕಾರಿಯಾಗುತ್ತದೆ ಎಂದು ತಿಳಿಸಿದರು.

ಯೋಗವು ಭಾರತೀಯ ಸಂಸ್ಕೃತಿಯಲ್ಲಿ ಪುರಾತನ ಕಾಲದಿಂದಲೂ ನಡೆದುಕೊಂಡು ಬಂದಿರುವ ಮಹತ್ವದ ಪದ್ಧತಿಯಾಗಿದೆ. ಪ್ರಾಚೀನ ಕಾಲದ ಋಷಿಮುನಿಗಳು ಯೋಗ ಮತ್ತು ಧ್ಯಾನದ ಮೂಲಕ ಆಧ್ಯಾತ್ಮಿಕ ಸಾಧನೆ ಮಾಡುತ್ತಿದ್ದರು. ಧ್ಯಾನವು ಮನಸ್ಸಿನ ಏಕಾಗ್ರತೆ ಹಾಗೂ ನೆಮ್ಮದಿಗೆ ಸಹಕಾರಿಯಾಗಿದ್ದು, ಪ್ರತಿಯೊಬ್ಬರೂ ತಮ್ಮ ದಿನನಿತ್ಯದ ಜೀವನದಲ್ಲಿ ಯೋಗಾಭ್ಯಾಸಕ್ಕೆ ಸಮಯ ಮೀಸಲಿಡಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಪತಂಜಲಿ ಯೋಗ ಸಮಿತಿಯ ವಿಭಾಗದ ಪ್ರಭಾರಿಗಳು, ಯೋಗ ಸಾಧಕರು, ಯೋಗ ಶಿಕ್ಷಕರು ಹಾಗೂ ಬಡಾವಣೆಯ ನಿವಾಸಿಗಳಾದ ಚಂದ್ರಶೇಖರ ರೆಡ್ಡಿ, ನಿವೃತ್ತ ರೈಲ್ವೆ ಉದ್ಯೋಗಿ ಮಹಾದೇವಪ್ಪ, ಕೃಷ್ಣ ಕುರ್ಡಿಕರ್, ಎಚ್.ಎಂ. ಕೃಷ್ಣ ಶಾವಂತಗೇರಾ, ಸರ್ಕಾರಿ ನೌಕರರ ಸಂಘದ ಅಧ್ಯಕ್ಷರು, ಹಿರಿಯ ಪತ್ರಕರ್ತ ಭೀಮರಾವ್ ಹದ್ದಿನಾಳ, ಅಣ್ಣಾರಾವ್ ಎ.ಡಿ., ನರಸಪ್ಪ ಪಿಡಿಒ, ರವಿ ಮೆಡಿಕಲ್, ಶೈಲಜಾ, ಶೃತಿ, ಪದ್ಮಾ, ರಾಮೇಶ್ವರಿ, ಅನಿತಾ, ವಿಜಯಲಕ್ಷ್ಮಿ, ಉಮಾಮಹೇಶ್ವರಿ, ನಾಗಲಕ್ಷ್ಮಿ, ಸುನಂದಾ ಸೇರಿದಂತೆ ಬಡಾವಣೆಯ ನಿವಾಸಿಗಳು ಭಾಗವಹಿಸಿದ್ದರು.

# ಸಿದ್ದರಾಮಯ್ಯ ಸ್ಟಿಂಗ್ ಪ್ರಕರಣಕ್ಕೆ ಹೊಸ ತಿರುವು: ಸೂಚಿಸಿದಂತೆ ಸುಳ್ಳು ಹೇಳಿದ್ದಾಗಿ ಮಹಿಳೆ ಹೇಳಿಕೆ

ಬೆಂಗಳೂರು: ರಾಜ್ಯ ರಾಜಕೀಯದಲ್ಲಿ ಸಂಚಲನ ಮೂಡಿಸಿರುವ ಸಿದ್ದರಾಮಯ್ಯ ವಿರುದ್ಧದ ಸ್ಟಿಂಗ್ ಆಪರೇಷನ್ ಪ್ರಕರಣಕ್ಕೆ ಹೊಸ ತಿರುವು ಸಿಕ್ಕಿದ್ದು, ಪ್ರಕರಣದಲ್ಲಿ ಭಾಗಿಯಾಗಿದ್ದಾರೆ ಎನ್ನಲಾದ ಕೇರಳ ಮೂಲದ ಮಹಿಳೆ ಪೊಲೀಸರ ವಿಚಾರಣೆ ವೇಳೆ ಮಹತ್ವದ ಹೇಳಿಕೆ ನೀಡಿದ್ದಾರೆ ಎಂದು ತಿಳಿದುಬಂದಿದೆ.

ಸ್ಟಿಂಗ್ ವಿಡಿಯೊದಲ್ಲಿ ಕಾಣಿಸಿಕೊಂಡಿದ್ದ ಮುಸುಕುಧಾರಿ ಮಹಿಳೆ, ಸಿದ್ದರಾಮಯ್ಯ ಅವರು ತಮಗೆ ಯಾವುದೇ ತೊಂದರೆ ನೀಡಿಲ್ಲ. ತಾವು ಅವರನ್ನು ಭೇಟಿಯೇ ಆಗಿಲ್ಲ. ಇತರರು ಹೇಳಿಕೊಟ್ಟಂತೆ ಮಾತನಾಡಿದ್ದಾಗಿ ಪೊಲೀಸರ ಮುಂದೆ ಹೇಳಿಕೆ ನೀಡಿದ್ದಾರೆ ಎನ್ನಲಾಗಿದೆ.

2023ರಲ್ಲಿ ಕೆಲವರ ಒತ್ತಡಕ್ಕೆ ಮಣಿದು ಸಿದ್ದರಾಮಯ್ಯ ವಿರುದ್ಧ ಸುಳ್ಳು ಆರೋಪಗಳನ್ನು ಮಾಡಿದ್ದೆ. ಉದ್ದೇಶಪೂರ್ವಕವಾಗಿ ತಮ್ಮಿಂದ ಅಂತಹ ಹೇಳಿಕೆಗಳನ್ನು ನೀಡಿಸಲಾಗಿತ್ತು. ಸಿದ್ದರಾಮಯ್ಯ ಅವರ ವರ್ಚಸ್ಸಿಗೆ ಧಕ್ಕೆ ತರುವ ಉದ್ದೇಶದಿಂದ ಸ್ಟಿಂಗ್ ಆಪರೇಷನ್ ರೂಪಿಸಲಾಗಿತ್ತು ಎಂದು ಮಹಿಳೆ ವಿಚಾರಣೆ ವೇಳೆ ತಿಳಿಸಿರುವುದಾಗಿ ವರದಿಯಾಗಿದೆ.

ಸುಮಾರು ಒಂದು ವಾರದ ಹಿಂದೆ ಸಿಸಿಬಿ ಅಧಿಕಾರಿಗಳ ತಂಡ ಕೇರಳದ ಕ್ಯಾಲಿಕಟ್‌ಗೆ ತೆರಳಿ ಮಹಿಳೆಯ ಹೇಳಿಕೆಯನ್ನು ದಾಖಲಿಸಿಕೊಂಡಿದ್ದು, ವಿಡಿಯೊ ಚಿತ್ರೀಕರಣವನ್ನೂ ಮಾಡಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ. ಪ್ರಕರಣದ ತನಿಖೆ ಮುಂದುವರಿದಿದ್ದು, ಮುಂದಿನ ಒಂದೆರಡು ವಾರಗಳಲ್ಲಿ ಆರೋಪಪಟ್ಟಿ ಸಲ್ಲಿಕೆಯಾಗುವ ಸಾಧ್ಯತೆಯಿದೆ ಎನ್ನಲಾಗಿದೆ.

ಇದರ ನಡುವೆ ಸ್ಟಿಂಗ್ ಆಪರೇಷನ್ ವಿವಾದದ ಕುರಿತು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರನ್ನು ಭೇಟಿಯಾಗಲು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮುಂದಾಗಿದ್ದಾರೆ. ನವೆಂಬರ್ 2ರಂದು ಭೇಟಿಗೆ ಸಮಯ ಕೋರಿದ್ದು, ಪ್ರಕರಣ ಹಾಗೂ ರಾಜ್ಯದ ರಾಜಕೀಯ ಬೆಳವಣಿಗೆಗಳ ಕುರಿತು ಚರ್ಚಿಸುವ ನಿರೀಕ್ಷೆಯಿದೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯಿಸಿರುವ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ, ಸ್ಟಿಂಗ್ ಆಪರೇಷನ್ ಹಿಂದಿರುವ ಪ್ರಮುಖ ಸೂತ್ರಧಾರಿಯನ್ನು ಮೊದಲು ಬಂಧಿಸಬೇಕು ಎಂದು ಒತ್ತಾಯಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಮಾತನಾಡಿದ ಅವರು, ಈ ವಿಚಾರದಲ್ಲಿ ಕಾಂಗ್ರೆಸ್ ದ್ವಂದ್ವ ನಿಲುವು ಅನುಸರಿಸುತ್ತಿದೆ. ಸ್ಟಿಂಗ್ ಆಪರೇಷನ್ ಹೆಸರಿನಲ್ಲಿ ಸಿದ್ದರಾಮಯ್ಯ ಅವರಿಗೆ ಅವಮಾನ ಮಾಡಲಾಗಿದೆ ಎಂದು ಆರೋಪಿಸಿದ್ದಾರೆ.

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಕೂಡ ಪ್ರಕರಣದ ಕುರಿತು ಪ್ರತಿಕ್ರಿಯಿಸಿದ್ದು, ಮಾಜಿ ಮುಖ್ಯಮಂತ್ರಿಯೊಬ್ಬರು ತಮ್ಮ ವಿರುದ್ಧ ಸ್ಟಿಂಗ್ ಆಪರೇಷನ್ ನಡೆದಿದೆ ಎಂದು ಆರೋಪಿಸಿದರೂ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ವಿಷಯವನ್ನು ಗಂಭೀರವಾಗಿ ಪರಿಗಣಿಸಿಲ್ಲ ಎಂದು ಟೀಕಿಸಿದ್ದಾರೆ.

ಮಹಿಳೆಯ ಹೇಳಿಕೆಯಿಂದ ಪ್ರಕರಣದ ತನಿಖೆಗೆ ಹೊಸ ಆಯಾಮ ದೊರೆತಿದ್ದು, ಸ್ಟಿಂಗ್ ಆಪರೇಷನ್ ರೂಪಿಸಿದವರು ಯಾರು ಹಾಗೂ ಅದರ ಹಿಂದಿನ ಉದ್ದೇಶವೇನು ಎಂಬುದು ತನಿಖೆಯಿಂದ ಸ್ಪಷ್ಟವಾಗಬೇಕಿದೆ.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K